# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 87 | TUESDAY 09-06-2026 | PRGI No : KNKAN/26/A0962 | Pages:4 | Rs.2.00 | M: 9742418836

## ಆಟದಲ್ಲಿ ಕಾಯಿ ಮುನ್ನಡೆಸುವುದು ಮುಖ್ಯ: ಸಿಎಂ



ಬೆಂಗಳೂರು: "ರಾಜಕಾರಣದಲ್ಲಿ ಚದುರಂಗದ ಆಟ ಆಡುವಾಗ ಯಾರಾದರು ಯಾವ ರೀತಿ ಕಾಯಿ ನಡೆಸುತ್ತಾರೆ ಎಂದು ಹೇಳುತ್ತಾರೆಯೇ? ಯಾರು ಹೇಳುವುದಿಲ್ಲ " ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ವಿಧಾನಸೌಧದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಸೋಮವಾರ ಪ್ರತಿಕ್ರಿಯೆ ನೀಡಿದರು. ಪರಿಷತ್ ಚುನಾವಣೆಯಲ್ಲಿ ವಿನಯ್ ಕಾರ್ತಿಕ್ ಸ್ಪರ್ಧೆ, ಜೆಡಿಎಸ್ ಹೆಚ್ಚುವರಿ ಅಭ್ಯರ್ಥಿ ಸ್ಪರ್ಧೆ ಬಗ್ಗೆ ಕೇಳಿದಾಗ ಶಿವಕುಮಾರ್ ಅವರು ಈ ರೀತಿ ಪ್ರತಿಕ್ರಿಯೆ ನೀಡಿದರು.

ದೇವೇಗೌಡರಿಗೆ ರಾಜ್ಯಸಭೆ ಟಿಕೆಟ್ ತಪ್ಪಿಸಿ ಬಿಜೆಪಿ ಅನ್ಯಾಯ ಮಾಡಿದೆ ಎಂದು ಸುರ್ಜೆವಾಲ ಅವರು ಟೀಕೆ ಮಾಡಿರುವ ಬಗ್ಗೆ ಕೇಳಿದಾಗ, "ನಾನು ಸದ್ಯಕ್ಕೆ ಏನು ಮಾತನಾಡುವುದಿಲ್ಲ. ಅವರು ಮಾತಾಡಿದ್ದಾರೆ. ಆದರೆ ನಾನು ಮಾತಾಡಕ್ಕೆ ಹೋಗುವುದಿಲ್ಲ. ನಮ್ಮ ಪಕ್ಷದ ಚಿಂತನೆಯನ್ನು ನಾನು ಪಾಲನೆ ಮಾಡುತ್ತೇನೆ" ಎಂದರು.

ಸೂರಜ್ ಹೆಗ್ಡೆ ತ್ಯಾಗಕ್ಕೆ ಹೆಸರಾದವರು:

"ಸೂರಜ್ ಹೆಗ್ಡೆ ಆತ್ಮೀಯ ಸ್ನೇಹಿತ. ತ್ಯಾಗಕ್ಕೆ ಹೆಸರಾದವರು. ಇದೇ ಸ್ಥಾನ ಬೇಕು ಎಂದೂ ಕೇಳುತ್ತಿರಲಿಲ್ಲ. ನಾನು ಹಿಂದೆ ಅವರಿಗೆ ಮೈಸೂರು ಸಂಸದ ಸ್ಥಾನಕ್ಕೆ ಟಿಕೆಟ್ ಕೊಡಿಸಬೇಕು ಅಂತ ಬಹಳ ಹೋರಾಟ ಮಾಡಿದ್ದೆ. ಅವರು ದೇವರಾಜ ಅರಸು ಅವರ ಮೊಮ್ಮಗ. ಪಕ್ಷದ ನಿಷ್ಠಾವಂತ ಕಾರ್ಯಕರ್ತ. ನನ್ನ ಜೊತೆ ಪದಾಧಿಕಾರಿಯಾ ಗಿದ್ದವರು. ಗ್ಯಾರಂಟಿ ಸಮಿತಿ ಉಪಾಧ್ಯಕ್ಷರಾಗಿದ್ದವರು. ನಮ್ಮ ಸರ್ಕಾರ ರಾಜ್ಯ ಮಟ್ಟದ ಸಚಿವ ಸ್ಥಾನ ಕೊಟ್ಟಿತ್ತು. ಅವರ ಮೇಲೆ ನಾನು ದೊಡ್ಡ ಆಕಾಂಕ್ಷೆ ಇಟ್ಟುಕೊಂಡಿದ್ದೆ. ಪಕ್ಷ ಅವರ ಮೇಲೆ ಅವಲಂಬಿಸಿತ್ತು" ಎಂದು ತಿಳಿಸಿದರು.

## ರಾಜ್ಯಸಭೆಗೆ ಸಾಮಾನ್ಯ ಕಾರ್ಯಕರ್ತನನ್ನು BJP ಅಭ್ಯರ್ಥಿ ಮಾಡಿದೆ; ದೇವೇಗೌಡರ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ

ಬೆಂಗಳೂರು: ಕರ್ನಾಟಕ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಸೋಮವಾರ, ಪಕ್ಷಕ್ಕಾಗಿ ಪ್ರಾಮಾಣಿಕವಾಗಿ ದುಡಿದ ಸಾಮಾನ್ಯ ಕಾರ್ಯಕರ್ತನನ್ನು ರಾಜ್ಯಸಭೆ ಚುನಾವಣೆಗೆ ಬಿಜೆಪಿ ಅಭ್ಯರ್ಥಿಯಾಗಿ ಆಯ್ಕೆ ಮಾಡಲಾಗಿದೆ ಎಂದು ಹೇಳಿದರು.

ಮಾಜಿ ಪ್ರಧಾನಮಂತ್ರಿ ಹಾಗೂ ಜೆಡಿಎಸ್ ವರಿಷ್ಠ ಎಚ್.ಡಿ. ದೇವೇಗೌಡರಿಗೆ ರಾಜ್ಯಸಭೆ ಟಿಕೆಟ್ ನೀಡುವ ಕುರಿತು ರಾಜ್ಯ ಘಟಕ ಮಟ್ಟದಲ್ಲಿ ಯಾವುದೇ ಚರ್ಚೆ ನಡೆದಿಲ್ಲ ಎಂದು ಅವರು ಇದೇ ವೇಳೆ ಸ್ಪಷ್ಟಪಡಿಸಿದರು. ಇತ್ತೀಚೆಗಷ್ಟೇ 94ನೇ ವಯಸ್ಸಿಗೆ ಕಾಲಿಟ್ಟಿರುವ ದೇವೇಗೌಡರಿಗೆ ಬಿಜೆಪಿ ಮರುನಾಮನಿರ್ದೇಶನ ನೀಡದಿರುವುದನ್ನು ಆಡಳಿತಾರೂಢ ಕಾಂಗ್ರೆಸ್ ಸೇರಿದಂತೆ ಹಲವು ವಲಯಗಳು ಟೀಕಿಸಿದ ಬೆನ್ನಲ್ಲೇ ವಿಜಯೇಂದ್ರ ಈ ಸ್ಪಷ್ಟನೆ ನೀಡಿದರು.

ಭಾನುವಾರ ತಡರಾತ್ರಿ ಬಿಜೆಪಿ ಕರ್ನಾಟಕದಿಂದ ನಡೆಯಲಿರುವ ರಾಜ್ಯಸಭೆ ಚುನಾವಣೆಗೆ ಪ್ರೊ. ಎಂ. ನಾಗರಾಜ ಅವರನ್ನು ತನ್ನ ಅಭ್ಯರ್ಥಿಯಾಗಿ ಘೋಷಿಸಿತ್ತು. ವಿಧಾನಸಭೆಯಲ್ಲಿ ಇರುವ ತನ್ನ ಪ್ರಸ್ತುತ ಸಂಖ್ಯಾಬಲದ ಆಧಾರದ ಮೇಲೆ ಬಿಜೆಪಿ ನಾಲ್ಕು ಸ್ಥಾನಗಳಲ್ಲಿ ಒಂದು ಸ್ಥಾನವನ್ನು ಗೆಲ್ಲುವ ಸಾಧ್ಯತೆಯಿದೆ. ಈ ಚುನಾವಣೆಯು ಜೂನ್ 18ರಂದು ನಡೆಯಲಿದೆ.



ದೇವೇಗೌಡರು ಸೇರಿದಂತೆ ನಾಲ್ವರು ರಾಜ್ಯಸಭಾ ಸದಸ್ಯರ ಅವಧಿ ಈ ತಿಂಗಳ ಅಂತ್ಯಕ್ಕೆ ಮುಕ್ತಾಯಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಚುನಾವಣೆ ನಡೆಯುತ್ತಿದೆ. ಬಿಜೆಪಿಯ ಮಿತ್ರಪಕ್ಷವಾದ ಜೆಡಿಎಸ್, ತನ್ನ ವರಿಷ್ಠರಾದ ದೇವೇಗೌಡರನ್ನು ಬಿಜೆಪಿ ಮರುನಾಮನಿರ್ದೇಶನ ಮಾಡಲಿದೆ ಎಂಬ ನಿರೀಕ್ಷೆಯಲ್ಲಿತ್ತು.

ಈ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ವಿಜಯೇಂದ್ರ, "ದೇವೇಗೌಡರು ಎನ್‌ಡಿಎ ಬಲವರ್ಧನೆಗೆ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಬೆಂಬಲ ನೀಡಲು ಸಾಕಷ್ಟು ಕೆಲಸ ಮಾಡಿದ್ದಾರೆ. ಅವರು ಹಿರಿಯ ನಾಯಕರು. ಅವರ ಬಗ್ಗೆ ನಮಗೆ ಅಪಾರ ಗೌರವವಿದೆ. ಆದರೆ ದೇವೇಗೌಡರ ರಾಜ್ಯಸಭಾ ನಾಮನಿರ್ದೇಶನ ಕುರಿತು ರಾಜ್ಯ ಘಟಕ ಮಟ್ಟದಲ್ಲಿ ಯಾವುದೇ ಚರ್ಚೆ ನಡೆದಿಲ್ಲ," ಎಂದರು. ಅಂತೆಯೇ ರಾಷ್ಟ್ರೀಯ ಮಟ್ಟದ ಬೆಳವಣಿಗೆಗಳ ಕುರಿತು ಹೆಚ್ಚಿನ ಪ್ರತಿಕ್ರಿಯೆ ನೀಡಲು ಅವರು ನಿರಾಕರಿಸಿದರು.

ಮಾಜಿ ಮಂಡ್ಯ ಸಂಸದೆ ಹಾಗೂ ನಟಿ ಸುಮಲತಾ ಅಂಬರೀಶ್ ಅವರ ಹೆಸರೂ ಚರ್ಚೆಯಲ್ಲಿತ್ತು. ಆದರೆ ರಾಜಕೀಯ ಪರಿಸ್ಥಿತಿಯನ್ನು ವಿಶ್ಲೇಷಿಸಿದ ನಂತರ ಪಕ್ಷದ ನಾಯಕತ್ವವು ಯಾರಿಗೆ ಟಿಕೆಟ್ ನೀಡಬೇಕು ಎಂಬುದನ್ನು ನಿರ್ಧರಿಸಿದೆ ಎಂದು ಅವರು ಹೇಳಿದರು.

**ಸಾಮಾನ್ಯ ಕಾರ್ಯಕರ್ತನನ್ನು :ಎಕ ಅಭ್ಯರ್ಥಿ ಮಾಡಿದೆ**

"ಪಕ್ಷಕ್ಕಾಗಿ ಪ್ರಾಮಾಣಿಕವಾಗಿ ದುಡಿದ ಸಾಮಾನ್ಯ ಕಾರ್ಯಕರ್ತನಿಗೆ ನಾವು ಅವಕಾಶ ನೀಡಿದ್ದೇವೆ. ಸುಮಲತಾ ಅವರ ಬಗ್ಗೆ ನಮಗೆ ಅಪಾರ ಗೌರವವಿದೆ. 2019ರ ಲೋಕಸಭೆ ಚುನಾವಣೆಯಲ್ಲಿ ಅವರು ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದಾಗ ಬಿಜೆಪಿ ಬೆಂಬಲ ನೀಡಿತ್ತು. ನಮ್ಮ ಬೆಂಬಲದಿಂದ ಅವರು ಭಾರೀ ಅಂತರದಿಂದ ಗೆದ್ದಿದ್ದರು. 2024ರ ಲೋಕಸಭೆ ಚುನಾವಣೆಯಲ್ಲಿ ಮೈತ್ರಿ ಪಕ್ಷ ಜೆಡಿಎಸ್‌ನ ಎಚ್.ಡಿ. ಕುಮಾರಸ್ವಾಮಿ ಅವರಿಗೆ ಅವಕಾಶ ಕಲ್ಪಿಸಲು ಅವರು ತಮ್ಮ ಸ್ಥಾನವನ್ನು ತ್ಯಜಿಸಿದರು. ಇದನ್ನು ಯಾರೂ ನಿರಾಕರಿಸಲಾಗುವುದಿಲ್ಲ, ಅಂತೆಯೇ ಇಲ್ಲಿಗೆ ಎಲ್ಲವೂ ಮುಗಿದಿಲ್ಲ. ಮುಂದಿನ ದಿನಗಳಲ್ಲಿ ಪಕ್ಷದ ನಾಯಕತ್ವವು ಅವರಿಗೆ ಸೂಕ್ತ ಸ್ಥಾನಮಾನ ನೀಡುವ ಬಗ್ಗೆ ಖಂಡಿತವಾಗಿಯೂ ಪರಿಗಣಿಸಲಿದೆ" ಎಂದು ವಿಜಯೇಂದ್ರ ಹೇಳಿದರು. ರಾಜ್ಯಸಭೆಗೆ ಪ್ರೊ. ನಾಗರಾಜ ಅವರನ್ನು ಅಭ್ಯರ್ಥಿಯಾಗಿ ಘೋಷಿಸುವ ಜೊತೆಗೆ, ಕರ್ನಾಟಕ ವಿಧಾನ ಪರಿಷತ್ ಚುನಾವಣೆಗೆ ಲಿಂಗರಾಜ ಪಾಟೀಲ್ ಹಾಗೂ ರಘು ಕೌಟಿಲ್ಯ ಅವರನ್ನು ಬಿಜೆಪಿ ಅಭ್ಯರ್ಥಿಗಳಾಗಿ ಭಾನುವಾರ ರಾತ್ರಿ ಘೋಷಿಸಿತು. ಅಭ್ಯರ್ಥಿಗಳ ಬಗ್ಗೆ ಮಾತನಾಡಿದ ವಿಜಯೇ ಂದ್ರ, ಪ್ರೊ. ನಾಗರಾಜ ಅವರು ಹಿಂದುಳಿದ ವರ್ಗದ ಕುರುಬ ಸಮುದಾಯಕ್ಕೆ ಸೇರಿದವರಾಗಿದ್ದು, ಆರ್‌ಎಸ್‌ಎಸ್‌ನಲ್ಲಿ ಬೆಳೆದು, ಎಬಿವಿಪಿ ಹಾಗೂ ಬಿಜೆಪಿಯಲ್ಲಿ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ ಎಂದು ಹೇಳಿದರು.

## ವಿದ್ಯುತ್ ಖಾಸಗಿಕರಣ ವಿರೋಧಿಸಿ ರೈತರಿಂದ ಸರ್ಕಾರದ ವಿರುದ್ಧ ಪ್ರತಿಭಟನೆ

### ಟಾಟಾ ಪವರ್ ಕಂಪನಿಗೆ ನೀಡಿದರೆ ರಾಜ್ಯಾದ್ಯಂತ ಉಗ್ರ ಹೋರಾಟ – ಮಹಾದೇವ ಮಡಿವಾಳ ಎಚ್ಚರಿಕೆ

**ಬೆಳಗಾವಿ ವಾರ್ತೆ ಅಥಣಿ :** ಇಂಧನ ಮತ್ತು ಗ್ಯಾಸ್ ಬೆಲೆಯನ್ನು ಹೆಚ್ಚಿಸುವ ಮೂಲಕ ರೈತರ ಮತ್ತು ಜನಸಾಮಾನ್ಯರ ಜೊತೆ ಕೇಂದ್ರ ಮತ್ತು ರಾಜ್ಯ ಸರ್ಕಾರ ಚೆಲ್ಲಾಟವಾ ಡುತ್ತಿವೆ, ರೈತರಿಗೆ ಮತ್ತು ಜನಸಾಮಾನ್ಯರಿಗೆ ಅಗತ್ಯವಾಗಿರುವ ವಿದ್ಯುತ್ ಶಕ್ತಿಯನ್ನು ಖಾಸಗಿಕರಣ ಮಾಡುತ್ತಿರುವುದು ವಿಷಾದನೀಯ, ಇದರಿಂದ ರೈತರ ಮತ್ತು ಅನೇಕ ಕಾರ್ಮಿಕರ ಬದುಕು ಅತಂತ್ರವಾ ಗುತ್ತದೆ, ಯಾವುದೇ ಕಾರಣಕ್ಕೂ ಇದನ್ನ ಖಾಸಗಿಕರಣಗೊಳಿಸಬಾರದು ಎಂದು ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಅಧ್ಯಕ್ಷ ಮಹಾದೇವ ಮಡಿವಾಳ ರಾಜ್ಯ ಸರ್ಕಾರವನ್ನ ಆಗ್ರಹಿಸಿದರು.

ಅವರು ಶನಿವಾರ ಇಲ್ಲಿನ ಮಿನಿ ವಿಧಾನಸೌಧ ಕಾರ್ಯಾಲಯದ ಮುಂದೆ ಪ್ರತಿಭಟನೆ ನಡೆಸಿ ತಹಸೀಲ್ದಾರ್ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು. ಈ ವೇಳೆ ಮಾತನಾಡಿದ ಅವರು ಕೇಂದ್ರ ಮತ್ತು ರಾಜ್ಯ ಸರಕಾರಗಳು ರೈತರ ಜೊತೆ ಚೆಲ್ಲಾಟವಾಡುತ್ತಿದ್ದು, ರೈತರು ಬೆಳೆದ ಬೆಳೆಗಳಿಗೆ ಸೂಕ್ತ ಬೆಂಬಲ ಬೆಲೆ ನೀಡದೆ ಮೋಸ ಮಾಡುತ್ತೇವೆ. ಈಗಾಗಲೇ ನಮ್ಮ ರೈತರ ಬದುಕು ಸ್ವತಂತ್ರವಾಗಿದ್ದು, ಸಂಕಷ್ಟದಲ್ಲಿರುವ ರೈತರಿಗೆ ಸರ್ಕಾರ ಉಚಿತ ವಿದ್ಯುತ್ ನೀಡುವ ಬದಲು ಖಾಸಗಿಕರಣ ಮಾಡುತ್ತಿರುವುದು ಗಾಯದ ಮೇಲೆ ಬರೆ ಎಳೆದಂತೆ. ಸಿಎಂ ಡಿಕೆ ಶಿವಕುಮಾರ್ ಹಾಗೂ ಇಂಧನ ಸಚಿವರಾದ ಕೆ ಜಿ ಜಾರ್ಜ್ ಅವರು ಹೆಸ್ಕಾಂ ಸಂಸ್ಥೆಯನ್ನು ಟಾಟಾ ಪವರ್ ಕಂಪನಿಗೆ ವಹಿಸುವ ಮೂಲಕ ಖಾಸಗಿಕರಣ ಗೊಳಿಸುತ್ತಿರು ವಕ್ಕೆ ನಮ್ಮದು ವಿರೋಧವಿದೆ. ರಾಜ್ಯ ಸರ್ಕಾರ ಈ ರೈತ ವಿರೋಧಿ ನೀತಿಯನ್ನ ಕೂಡಲೇ ಕೈಬಿಡಬೇಕು ಎಂದು ಅಗ್ರಹಿಸಿದರು.




ರಾಜ್ಯದಲ್ಲಿಯೇ ಅತ್ಯಂತ ಹೆಚ್ಚಿನ ಪ್ರಮಾಣದಲ್ಲಿ ವಿದ್ಯುತ್ ಬಳಕೆದಾರರಾಗಿರುವ ಗ್ರಾಮೀಣ ಭಾಗದ ರೈತಾಪಿ ವರ್ಗದವರು ಹಾಗೂ ಕೂಲಿ ಕಾರ್ಮಿಕರು ಮತ್ತು ಮತ್ತು ವಿದ್ಯುತ್ ಬಳಕೆಯಿಂದಲೆ ತಮ್ಮ ಕೆಲಸದನ್ನು ನಂಬಿಕೊಂಡಿರುವ ಹಲವಾರು ರೈತರು ಹಾಗೂ ಕಾರ್ಮಿಕರಿಗೆ ಇದರಿಂದ ಭಾರೀ ಹಾನಿಯಾಗುವ ಸಂಭವ ಇರುತ್ತದೆ, ಕಾರಣ ರೈತರು ಬಡ ಗ್ರಾಹಕರು ಸಬ್ಸಿಡಿ ಆಧಾರಿತ ಗ್ರಾಹಕರಾಗಿದ್ದಾರೆ. ಸಾರ್ವಜನಿಕರ ಹಿತದೃಷ್ಟಿಯಿಂದ ಹೆಸ್ಕಾಂ ಸಂಸ್ಥೆಯನ್ನು ಟಾಟಾ ಪವರ ಕಂಪನಿಗೆ ಹಸ್ತಾಂತರಿಸುವುದನ್ನು ಕೈ ಬಿಡಬೇಕು. ಇಲ್ಲವಾದರೆ ರಾಜ್ಯದ್ಯಂತ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ರೈತ ಸಂಘದ ಮುಖಂಡರಾದ ಸಂಗಪ್ಪ ಕರಿಗಾರ, ರಮೇಶ ಕುಂಬಾರ, ಬಾಹುಬಲಿ ಸಂಕಣ್ಣವರ, ಕಿರಣ್ ಮೀಸಾಳ, ದುಂಡಪ್ಪ ತನಂಗಿ, ಮಹದೇವ ಕುಚುನೂರ, ಲಕ್ಕಪ್ಪ ಪೂಜಾರಿ, ಜಗದೀಶ ಮರೆಗುದ್ದಿ, ಶಿವಾನಂದ ಮಗ ದುಮ್ಮ, ನಿಂಗಪ್ಪ ಉದ್ದಾನಗೋಳ, ಹನುಮಂತ ಮಹೇಶವಾಡಗಿ, ಮಹದೇವ್ ಹೊಸಮನಿ ಸೇರಿದಂತೆ ಇನ್ನಿತರರು ಇದ್ದರು.

## ಶೀಘ್ರದಲ್ಲೇ ಎರಡನೇ ಹಂತದ ಸಚಿವ ಸಂಪುಟ ವಿಸ್ತರಣೆ; ಬೆಳಗಾವಿ ಜಿಲ್ಲೆಗೆ ಮತ್ತಷ್ಟು ಸಚಿವ ಸ್ಥಾನಗಳು ದೊರೆಯುವ ವಿಶ್ವಾಸವಿದೆ

**ಬೆಳಗಾವಿ ವಾರ್ತೆ ಗೋಕಾಕ:** ರಾಜ್ಯ ಸಚಿವ ಸಂಪುಟದ ಎರಡನೇ ಹಂತದ ವಿಸ್ತರಣೆ ಶೀಘ್ರದಲ್ಲೇ ನಡೆಯಲಿದ್ದು, ಬೆಳಗಾವಿ ಜಿಲ್ಲೆಗೆ ಮತ್ತಷ್ಟು ಸಚಿವ ಸ್ಥಾನಗಳು ದೊರೆಯುವ ವಿಶ್ವಾಸವಿದೆ ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಸಂಪುಟದಲ್ಲಿ ಇನ್ನೂ ಹಲವು ಸ್ಥಾನಗಳು ಖಾಲಿ ಇದ್ದು, ಅವುಗಳನ್ನು ಹೆಚ್ಚು ದಿನ ಖಾಲಿ ಇಡಲು ಸಾಧ್ಯವಿಲ್ಲ. ಈ ತಿಂಗಳೊಳಗೆ ಸಚಿವ ಸಂಪುಟ ವಿಸ್ತರಣೆ ನಡೆದರೆ ಉತ್ತಮ ಎಂದು ಅಭಿಪ್ರಾಯಪಟ್ಟರು.

ಪಕ್ಷದಲ್ಲಿ ಒಬ್ಬರಿಗೆ ಒಂದು ಹುದ್ದೆ ಎಂಬ ನೀತಿಯನ್ನು ಅನುಸರಿಸುವ ಪ್ರಯತ್ನ ನಡೆಯುತ್ತಿರುವುದರಿಂದ ಕೆಪಿಸಿಸಿ ಅಧ್ಯಕ್ಷ ಸ್ಥಾನ ಮತ್ತು ಸಚಿವ ಸ್ಥಾನ ಎರಡನ್ನೂ ಒಬ್ಬರಿಗೆ ನೀಡುವ ಸಾಧ್ಯತೆ ಕಡಿಮೆಯಾಗಿದೆ ಎಂದು ಅವರು ಹೇಳಿ ದರು. ಪಕ್ಷದ ವರಿಷ್ಠರು ತೆಗೆದುಕೊಳ್ಳುವ ನಿರ್ಧಾರವನ್ನು ಎಲ್ಲರೂ ಒಪ್ಪಿಕೊಳ್ಳಬೇಕಾಗಿದೆ ಎಂದರು. ಮುಸ್ಲಿಂ ಸಮುದಾಯಕ್ಕೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ನೀಡುವ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಈ ಕುರಿತು ಪಕ್ಷದ ವರಿಷ್ಠರು ಸೂಕ್ತ ನಿರ್ಧಾರ ಕೈಗೊಳ್ಳಲಿದ್ದು, ಯಾವುದೇ ಸಮುದಾಯಕ್ಕೆ ಅನ್ಯಾಯವಾಗದಂತೆ ನೋಡಿಕೊಳ್ಳಲಾಗುವುದು ಎಂದು ತಿಳಿಸಿದರು.

ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ" ಎಂಬ ನಿರ್ಣಯ ಅಂಗೀಕರಿಸುವಂತೆ ಕನ್ನಡಪರ ಸಂಘಟನೆಗಳು ನಡೆಸುತ್ತಿರುವ ಹೋರಾಟದ ಕುರಿತು ಪ್ರತಿಕ್ರಿಯಿಸಿದ ಅವರು, ವಿಷಯದ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಹೇಳಿದರು.



ಆದಿತ್ಯರಾಜ್ ಕ್ಯಾಪಿಟಲ್ ಸೇರಿದಂತೆ ಹಣಕಾಸು ವಂಚನೆ ಪ್ರಕರಣಗಳ ಕುರಿತು ಮಾತನಾಡಿದ ಸಚಿವರು, ದೂರುಗಳು ಮತ್ತು ಕಾನೂನು ಪ್ರಕ್ರಿಯೆಗಳ ಆಧಾರದ ಮೇಲೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿದರು.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ತಮ್ಮ ಸಂಬಂಧದಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಸ್ಪಷ್ಟಪಡಿಸಿದ ಅವರು, ಮುಖ್ಯಮಂತ್ರಿ ಸ್ಥಾನ ಬದಲಾಗಿದ್ದರೂ ಪಕ್ಷದ ಹಿರಿಯ ನಾಯಕರೊಂದಿಗೆ ಉತ್ತಮ ಬಾಂಧವ್ಯ ಮುಂದುವರಿಯಲಿದೆ ಎಂದು ಹೇಳಿದರು.

ಸಚಿವ ಸಂಪುಟ ವಿಸ್ತರಣೆ, ಖಾತೆ ಹಂಚಿಕೆ ಹಾಗೂ ಪಕ್ಷದ ಸಂಘಟನೆಗೆ ಸಂಬಂಧಿಸಿದ ಕೆಲವು ವಿಚಾರಗಳಲ್ಲಿ ಅಸಮಾಧಾನಗಳು ಸಹಜ. ಆದರೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಅವುಗಳನ್ನು ಬಗೆಹರಿಸುವ ಶಕ್ತಿ ಸರ್ಕಾರಕ್ಕಿದೆ ಎಂದು ಸತೀಶ ಜಾರಕಿಹೊಳಿ ವಿಶ್ವಾಸ ವ್ಯಕ್ತಪಡಿಸಿದರು.

## ಪರಿಸರ ಮಾಹಿತಿ ಹಾಗೂ ಜಾಗೃತಿ ಕಾರ್ಯಕ್ರಮ ಉದ್ಘಾಟನೆ

**ಬೆಳಗಾವಿ ವಾರ್ತೆ ಮೂಡಲಗಿ :** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್‌ನ ಮೂಡಲಗಿ ತಾಲೂಕು ಹಾಗೂ ರಾಜಾಪೂರ ಜ್ಞಾನ ಗಂಗೋ ತ್ರಿ ಆಂಗ್ಲ ಮಾದ್ಯಮ ಶಾಲೆ ಆಶ್ರಯ ದಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಪರಿಸರ ಮಾಹಿತಿ ಹಾಗೂ ಜಾಗೃತಿ ಕಾರ್ಯಕ್ರಮ ಜ್ಞಾನ ಗಂಗೋತ್ರಿ ಶಾಲೆ ಜರುಗಿತು

ಯೋಜನೆಯ ತಾಲೂಕಿನ ಕ್ಷೇತ್ರ ಯೋಜನಾಧಿಕಾರಿ ಸಂತೋಷ ಅವರು ಮಾತನಾಡಿ, ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಪರಿಸರ ರಕ್ಷಣೆಗೆ ಹಲವಾರು ಯೋಜನೆಯನ್ನು ಕೈಗೊಳ್ಳತ್ತಿರುವದನ್ನು ಗ್ರಾಮಸ್ಥರು ಸದುಪಯೋಗ ಪಡಿಸಿಕೊಳ್ಳಬೇಕೆಂದರು

ಶಿಕ್ಷಕಿ ಕವಿತಾ ರಾಮಣ್ಣವರ ಮಾತನಾಡಿ, ಜಾಗತಿಕವಾಗಿ ಹೆಚ್ಚಳವಾಗುತ್ತಿರುವ ತಾಪಮಾನ ಹಾಗೂ ಹಸಿರುಮನೆ ಪರಿಣಾಮದಿಂದಾಗಿ ಬಿಸಿ ಗಾಳಿ ಉಂಟಾಗುವಿಕೆ, ಉಷ್ಣಾಂಶದಲ್ಲಿ ಹೆಚ್ಚಳ, ಅಂತರ್ಜಲ ಮಟ್ಟದಲ್ಲಿ ಕುಸಿಯುವಿಕೆ ಉಂಟಾಗುವ ಮೂಲಕ ಪ್ರಾಕೃತಿಕ ಅಸಮತೋಲನ ಉಂಟಾಗಿ ಮುಂದೆ ಉಂಟಾಗಬಹುದಾದ ಅವಘಡಗಳ ಕುರಿತು ಮಾಹಿತಿ ನೀಡಿ, ಪ್ರಾಕೃತಿಕ ಅಸಮತೋಲನ ಕಾಯ್ದುಕೊಳ್ಳಲು ಹೆಚ್ಚಿನ ಸಂಖ್ಯೆಯ ಗಿಡಗಳನ್ನು ನೆಟ್ಟು, ನೀರುಣಿಸಿ, ಪಾಲನೆ-ಪೋಷಣೆ ಮಾಡಬೇಕಾದ ಅವಶ್ಯಕತೆ ಇದೆ ಎಂದರು.

ಕಾರ್ಯಕ್ರಮದ ಅಂಗವಾಗಿ ಶಾಲಾ ಆವರಣದಲ್ಲಿ ಸಸಿ ನೆಟ್ಟು ನೀರುಣಿಸಲಾಯಿತು.



ಮೂಡಲಗಿ : ತಾಲ್ಲೂಕಿನ ರಾಜಾಪೂರ ಜ್ಞಾನ ಗಂಗೋತ್ರಿ ಆಂಗ್ಲ ಮಾದ್ಯಮ ಶಾಲೆಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಹಮ್ಮಿಕೊಂಡಿದ ಪರಿಸರ ಮಾಹಿತಿ ಹಾಗೂ ಜಾಗೃತಿ ಕಾರ್ಯಕ್ರಮವನ್ನು ಗಣ್ಯರು ಉದ್ಘಾಟಿಸಿದರು

ಶಾಲೆಯ ಅಧ್ಯಕ್ಷ ಶಿವಪುತ್ರಪ್ಪ ಗುಂಡಪ್ಪಗೋಳ, ಪ್ರಾಂಶುಪಾಲ ಯುವರಾಜ ಸಿದಬಾಗೋಳ, ರಮೇಶ ಗುಂಡಪ್ಪಗೊಳ,ಬಸವರಾಜ ಗುಂಡಪ್ಪಗೋಳ, ಪ್ರಧಾನ ಗುರು ಸಿದ್ದು ಅಕ್ಕಿಸಾಗರ, ದೀಪಾ ಕಪ್ಪಲಗುದ್ದಿ, ಸಮೂಹ ಸಂಪನ್ಮೂಲ ಅಧಿಕಾರಿ ವಿಠ್ಠಲ ಬೂದಿ, ಮಲ್ಲೇಶ ನಡುವಿನಮನಿ, ಯೋಜನೆಯ ಕೃಷಿ ಮೇಲ್ವಿಚಾರಕರಾದ ಮೈಲಾರೆಪ್ಪ ಪೈಲಿ, ಲೋಕೇಶ್, ಸೇವಾ ಪ್ರತಿನಿಧಿಗಳಾದ ಸುಮಿತ್ರ ಬಡಿಗೇರ, ಸುನಂದಾ ಭಜಂತ್ರಿ, ಜಾನಕಿ, ಒಕ್ಕೂಟ ಸದಸ್ಯರು, ಸಂಘದ ಸದಸ್ಯರು, ಗಣ್ಯರು, ಶಾಲಾ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದರು.

## ಈಜಲು ತೆರಳಿದ್ದ ಅಣ್ಣ-ತಮ್ಮ ನೀರಲ್ಲಿ ಮುಳುಗಿ ಸಾವು

**ಬೆಳಗಾವಿ ವಾರ್ತೆ ಮೂಡಲಗಿ :** ಈಜಲು ಹೋದ ಅಣ್ಣ -ತಮ್ಮ ಇಬ್ಬರೂ ನೀರುಪಾಲಾಗಿರುವ ಘಟನೆ ತಾಲೂಕಿನ ಧರ್ಮಟ್ಟಿ ಗ್ರಾಮದಲ್ಲಿ ನಡೆದಿದೆ.

ತಾಲೂಕಿನ ಧರ್ಮಟ್ಟಿ ಗ್ರಾಮ ಸಾಗರ ಬಾಬು ಮಾದರ(15) ಹಾಗೂ ಪ್ರವೀಣ ಬಾಬು ಮಾದರ ಎಂಬಾತರು ಶನಿವಾರ ಮಧ್ಯಾಹ್ನ ಅಣ್ಣ- ತಮ್ಮ ಇಬ್ಬರು ಹಳ್ಳದ ಕಡೆಗೆ ಹೋಗಿದ್ದಾರೆ. ದುರಾದೃಷ್ಟ ತಮ್ಮ ಈಜಲು ಹೋಗಿದ್ದಾನೆ ಅವನ್ನ ಕಾಪಾಡಲು ಅಣ್ಣ ಕೂಡಾ ಹೋಗಿದ್ದರಿಂದ ಇಬ್ಬರಿಗೂ ಈಜಲು ಬಾರದ ಹಿನ್ನೆಲೆ



ಇಬ್ಬರು ಸಹ ಸಾವನಪ್ಪಿದ್ದಾರೆ.

ಈ ಕುರಿತು ಮೂಡಲಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು,

# ನಗರದಾದ್ಯಂತ ತಗ್ಗು ಗುಂಡಿಗಳಿಂದ ಕೂಡಿದ ಭತ್ತದ ನಗರಿ ಶಾಸಕರ ದಿವ್ಯ ನಿರ್ಲಕ್ಷ್ಯ ದಿಂದ ಅಭಿವೃದ್ಧಿ ಕಾಣದ ಬತ್ತದ ಕಣಜ

ವರದಿ : ಪಂಚಯ್ಯ ಹಿರೇಮಠ.



**ಬೆಳಗಾವಿ ವಾರ್ತೆ ಕೊಪ್ಪಳ:** ನಗರಾದ್ಯಂತ ಯಾವುದೇ ರಸ್ತೆಗಳಲ್ಲಿ ಸಂಚರಿಸಬೇಕೆಂದರೇ ಜೀವವನ್ನು ಅಂಗೈಯಲ್ಲಿ ಹಿಡಿದುಕೊಂಡು ಓಡಾಡಬೇಕಾದ ಅನಿವಾರ್ಯತೆ ಇಲ್ಲಿನ ನಾಗರಿಕರದಾಗಿದೆ.

ಹೌದು, ಚುನಾವಣೆಗೂ ಮುನ್ನ ಶಾಸಕರು ನೀಡಿದ ಆಶ್ವಾಸನೆಗಳು ಕೇವಲ ಆಶ್ವಾಸನೆಗಳಾಗಿಯೇ ಉಳಿದಿದ್ದು, ಮೂರು ವರ್ಷಗಳಿಂದ ಕ್ಷೇತ್ರ ಅಭಿವೃದ್ಧಿಯಲ್ಲಿ ಶೂನ್ಯವಾಗಿದೆ ಎನ್ನುವುದು ಬುದ್ಧಿ ಜೀವಿಗಳ ಮಾತಾಗಿದೆ.

ಕೇವಲ ಚುನಾವಣೆಯ ವೇಳೆ ಕ್ಷೇತ್ರವನ್ನು ರಾಜ್ಯದಲ್ಲಿಯೇ ಅಭಿವೃದ್ಧಿ ಕ್ಷೇತ್ರವನ್ನಾಗಿ ಮಾಡುತ್ತೇನೆ ಎಂದು ಹೇಳಿ ಶಾಸಕರಾದ ಮೇಲೆ ಕ್ಷೇತ್ರದತ್ತ ತಿರುಗಿಯು ನೋಡದೇ, ಸಾರ್ವಜನಿಕರ ಕುಂದು ಕೊರತೆ ಕೇಳದೇ ಶಾಸಕರು ಕ್ಷೇತ್ರದ ಜನತೆಗೆ ಅನ್ಯಾಯವೆಸುಗುತ್ತಿದ್ದಾರೆ ಎಂದು ಸಾರ್ವಜನಿಕರು, ಆರೋಪಿಸುತ್ತಿದ್ದಾರೆ.

ನಗರದ ಯಾವುದೇ ರಸ್ತೆಗಳಲ್ಲಿ ಸಂಚರಿಸಿದರು, ದೊಡ್ಡ ವಾಹನಗಳು ಹೋದರೆ ಸಾಕು ಅದರಿಂದ ಹಾರುವ ಧೂಳಿನಿಂದ ಅದೆಷ್ಟೋ ಅನಾಹುತಗಳಾಗಿ, ಜನರು ಕೈ, ಕಾಲು ಮುರಿದುಕೊಂಡ ಗಂಭೀರ ಆರೋಪಗಳು ಕೇಳಿಬಂದಿವೆ.

ನಗರದ ಮುಖ್ಯ ರಸ್ತೆಗಳೆಲ್ಲಾ ಕಡೆಗಳಲ್ಲಿ ರಸ್ತೆಗಳಲ್ಲಿ ಬೃಹದಾಕಾರದ ಗುಂಡಿಗಳು ಬಿದ್ದಿದ್ದು ವಾಹನ ಸವಾರರು ಐದು ನಿಮಿಷದ ದಾರಿಗೆ ಅರ್ಧಗಂಟೆ ಪ್ರಯಾಣಿಸಬೇಕಾದ ಅನಿವಾರ್ಯತೆ ಎದುರಾಗಿದೆ. ಮಳೆ ಬಂದರೆ ಸಾಕು ರಸ್ತೆಗಳಲ್ಲಿನ ಗುಂಡಿಗಳಲ್ಲಿ ನೀರು ತುಂಬಿಕೊಂಡು ರಾತ್ರಿ ಸಮಯದಲ್ಲಿ ರಸ್ತೆಯಲ್ಲಿ ಸಂಚರಿಸುವ ದ್ವಿಚಕ್ರ ವಾಹನ ಸವಾರರು ಅದರಲ್ಲಿ ಬಿದ್ದು ಹಲವಾರು ರೀತಿಯ ಅಪಘಾತಗಳು ಸಂಭವಿಸಿದ ಉದಾಹರಣೆಗಳಿವೆ.

ಇದು ಕೇವಲ ನಗರ ಮಾತ್ರವಲ್ಲದೇ ಕ್ಷೇತ್ರದ ಯಾವುದೇ ರಸ್ತೆಗಳಲ್ಲಿ ಸಂಚರಿಸಬೇಕೆಂದರೇ ವಾಹನ ಸವಾರರು ತಮ್ಮ ಜೀವವನ್ನು ಪಣಕ್ಕಿಟ್ಟು ಓಡಾಡಬೇಕಾಗಿದ್ದು, ಶಾಸಕರು ಕೂಡಲೇ ನಗರದ ಹಾಗೂ ಗ್ರಾಮೀಣ ಪ್ರದೇಶಗಳ ರಸ್ತೆಗಳ ಸುಧಾರಣೆ ಮಾಡಬೇಕು ಎನ್ನುವುದು ಸಾರ್ವಜನಿಕರ ಆಗ್ರಹವಾಗಿದೆ.

# ಕೊಪ್ಪಳ ನಗರ ವಸತಿ ರಹಿತರ ಆಶ್ರಯ ಕೇಂದ್ರದಲ್ಲಿ ವಿಶ್ವ ಪರಿಸರ ದಿನಾಚರಣೆ



**ಬೆಳಗಾವಿ ವಾರ್ತೆ ಕೊಪ್ಪಳ:** ಜಿಲಾಡಳಿತ, ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾ ಕೌಶಲ್ಯ ಮಿಷನ್, ನಗರಸಭೆ ಕೊಪ್ಪಳ, ಪಟ್ಟಣ ಪಂಚಾಯತ್ ಭಾಗ್ಯನಗರ ಮತ್ತು ಡಾ. ಬಿ.ಆರ್.ಅಂಬೇಡ್ಕರ್ ಶಿಕ್ಷಣ ಮತ್ತು ಮಾನವ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ (ಡೇ-ನಲ್ಮ್) ಯೋಜನೆಯ ನಗರ ವಸತಿ ರಹಿತರ ಆಶ್ರಯ ಕೇಂದ್ರದ ಆವರಣದಲ್ಲಿ ಶನಿವಾರ (ಜೂ. 6ರಂದು) ಸಸಿ ನೆಡುವ ಮೂಲಕ 2026ರ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು.

ಈ ಕಾರ್ಯಕ್ರಮಕ್ಕೆ ಕೊಪ್ಪಳ ನಗರಸಭೆಯ ಪ್ರಭಾರಿ ಪೌರಾಯುಕ್ತರು ಆಗಿರುವ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಂಜುನಾಥ ಎಂ. ಗುಂಡೂರು ಅವರು ಚಾಲನೆ ನೀಡಿದರು. ಬಳಿಕ ಮಾತನಾಡಿ, ನಗರದ ಎಲ್ಲಾ ನಾಗರಿಕರು ಪ್ರತಿಯೊಬ್ಬರು ಅವರವರ ಕುಟುಂಬದ ಸವಿನೆನಪಿಗಾಗಿ ಒಂದೊಂದು ಸಸಿಗಳನ್ನು ನೆಟ್ಟು, ಅವುಗಳನ್ನು ತಮ್ಮ ಕುಟುಂಬದ ಸದಸ್ಯರ ತರ ಜೋಪಾನ ಮಾಡಿ ಹೆಮ್ಮರವಾಗಿ ಬೆಳಸಬೇಕು. ಈ ನಿಟ್ಟಿನಲ್ಲಿ ಕೊಪ್ಪಳ ನಗರವನ್ನು ಹಸಿರು ನಗರವನ್ನಾಗಿಸುವಂತೆ ಮಾಡಲು ಎಲ್ಲರೂ ಕೈಜೋಡಿಸಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಭಾಗ್ಯನಗರ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿ ಸುರೇಶ್ ಬಬ್ಲಾದಿ, ಕೊಪ್ಪಳ ನಗರಸಭೆ ಸಹಾಯಕ ಕಾರ್ಯಪಾಲಕ ಅಭಿಯಂತರರದ ಹೆಚ್.ಎ.ಬಂಡಿವಡ್ಡರ್, ಸಹಾಯಕ ನಿರ್ದೇಶಕರಾದ ಮಂಜುನಾಥ ಬೆಲ್ಲದ, ಜಿಲ್ಲಾ ಕೌಶಲ್ಯ ಮಿಷನ್ ಅಭಿಯಾನ ವ್ಯವಸ್ಥಾಪಕರಾದ ಅಹ್ಮದ್ ಹುಸೇನ್, ಸಿಬ್ಬಂದಿ ವಿಶ್ವನಾಥ ಬಿ., ಹಿರಿಯ ಆರೋಗ್ಯ ನಿರೀಕ್ಷಕರಾದ ಜಯಶೀಲಾ ಮತ್ತು ರಾಜೇಶ್ವರಿ, ಡಾ ಬಿ.ಆರ್.ಅಂಬೇಡ್ಕರ್ ಶಿಕ್ಷಣ ಮತ್ತು ಮಾನವ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆಯ ಮುಖ್ಯಸ್ಥರಾದ ಗಿರೀಶ್ ಸೇರಿದಂತೆ ಕೊಪ್ಪಳ ನಗರಸಭೆ ಸಿಬ್ಬಂದಿಗಳು, ವಸತಿ ರಹಿತರ ಆಶ್ರಯ ಕೇಂದ್ರದಲ್ಲಿ ಆಶ್ರಯ ಪಡೆದ ಶಿಬಿರಾರ್ಥಿಗಳು, ಕೇಂದ್ರದ ಸಿಬ್ಬಂದಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಆಟೋನಗರಕ್ಕೆ ಜಿಲ್ಲಾಧಿಕಾರಿ ಭೇಟಿ; ಮೂಲ ಸದಸ್ಯರಿಗೆ ನ್ಯಾಯ ಒದಗಿಸಲು ಭರವಸೆ

**ಬೆಳಗಾವಿ ವಾರ್ತೆ ಗಂಗಾವತಿ:** ಸುಮಾರು 40 ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಆಟೋನಗರಕ್ಕೆ ಜೂನ್-8 ಸೋಮವಾರ ಜಿಲ್ಲಾಧಿಕಾರಿಗಳು ಭೇಟಿ ನೀಡಿ, ಹಿಂದಿನ ಜಿಲ್ಲಾಧಿಕಾರಿಗಳು 2014 ರಲ್ಲಿ ಹೊರಡಿಸಿದ ಆದೇಶದನ್ವಯ ವಿನ್ಯಾಸ ರಚಿಸಿ ಆಟೋನಗರದ ಮೂಲ ಸದಸ್ಯರುಗಳಿಗೆ ನ್ಯಾಯ ಒದಗಿಸಿಕೊಡಲು ಭರವಸೆ ನೀಡಿದರು.

ಸುಮಾರು 40 ವರ್ಷಗಳ ಹಿಂದೆಯೇ ಗಂಗಾವತಿ ನಗರಸಭೆ ಮಾಲೀಕತ್ವದ ಸರ್ವೆ ನಂ: 139, 139/1 ಒಟ್ಟು ವಿಸ್ತೀರ್ಣ 5-00 ಎಕರೆ ಭೂಮಿಯನ್ನು 1984-85ನೇ ಸಾಲಿನಲ್ಲಿ ಆಟೋನಗರ ನಿರ್ಮಾಣಕ್ಕಾಗಿ ಖರೀದಿಸಲಾಗಿ, ಸದರಿ ಆಟೋನಗರಕ್ಕೆ ವಿನ್ಯಾಸವನ್ನು ತಯಾರಿಸಿ ನಿವೇಶನಗಳನ್ನು ರಚಿಸಿ ಫಲಾನುಭವಿಗಳನ್ನು ಆಯ್ಕೆ ಮಾಡಿ ರಾಜ್ಯ ಹೆದ್ದಾರಿಗೆ ಹೊಂದಿಕೊಂಡ ನಿವೇಶನಗಳಿಗೆ ಪ್ರತಿ ಚದರ ಅಡಿಗೆ ರೂ. 15/- ರಂತೆ ಹಾಗೂ ಒಳಗಿನ ನಿವೇಶನಗಳಿಗೆ ರೂ. 7/- ರಂತೆ ಬೆಲೆಯನ್ನು ನಿಗದಿಪಡಿಸಿ ನಗರಸಭೆಯ ಸಾಮಾನ್ಯ ಸಭೆಯಲ್ಲಿ ನಿರ್ಣಯಿಸಲಾಗಿತ್ತು.

ಆಗಿನ ಜಿಲ್ಲಾಧಿಕಾರಿಗಳು ದಿ. 27.06.2014 ರಂದು ಆದೇಶ ಹೊರಡಿಸಿ, ನಗರಸಭೆ ಗಂಗಾವತಿ ಇವರು ಸಲ್ಲಿಸಿದ ಪ್ರಸ್ತಾವನೆಯಲ್ಲಿನ ಯಾದಿಯಲ್ಲಿರುವ 90 ಫಲಾನುಭವಿಗಳ ಪ್ರಕಾರ ಸಂಪೂರ್ಣ ಹಣವನ್ನು ಭರಣ ಮಾಡಿರುವ ಫಲಾನುಭವಿಗಳಿಗೆ ನಿವೇಶನವನ್ನು ಹಾಗೂ ಭಾಗಶಃ ಹಣ ಪಾವತಿಸಿರುವ ಫಲಾನುಭವಿಗಳಿಂದ ಪಡೆದಿರುವ ದರದನ್ವಯ ವ್ಯತ್ಯಾಸದ ಮೊತ್ತವನ್ನು ಪಡೆದುಕೊಂಡು, ಹಿರಿಯ ಉಪ ನೋಂದಣಾಧಿಕಾರಿಗಳು ಗಂಗಾವತಿಯವರಿಂದ ನೋಂದಣಿ ಮಾಡಿಕೊಂಡು ನಿವೇಶನಗಳನ್ನು ಫಲಾನುಭವಿಗಳಿಗೆ ಹಂಚಲು ಕ್ರಮವಹಿಸುವಂತೆ ಮತ್ತು ಕರಾರು ಒಪ್ಪಂದ ಪತ್ರದ ಪ್ರಕಾರ ವ್ಯತ್ಯಾಸ ಕಂಡುಬಂದಲ್ಲಿ ಯೋಜನಾ ಪ್ರಾಧಿಕಾರದಿಂದ ಅನುಮೋದನೆಯಾಗಿರುವ ವಿನ್ಯಾಸಗಳಿಗೆ ಹೊಂದಾಣಿಕೆ ಮಾಡಿಕೊಂಡು ಸಂಬಂಧಪಟ್ಟ ಫಲಾನುಭವಿಗಳಿಗೆ ಸರಿಪಡಿಸುವಿಕೆಯ ಕರಾರು ಪತ್ರ ಮಾಡಿಕೊಂಡು ಸದರಿ ಫಲಾನುಭವಿಗಳಿಗೆ ನಿವೇಶನಗಳನ್ನು ಹಂಚಿಕೆ ಮಾಡುವಂತೆ ಆದೇಶ ಮಾಡಿದ್ದರು.

ನಗರಸಭೆಯ ಈಗಿನ ಪೌರಾಯುಕ್ತ ಆರ್. ವಿರುಪಾಕ್ಷಮೂರ್ತಿಯವರು ಆಟೋನಗರದ ನಿವೇಶನಗಳ ವಿನ್ಯಾಸವನ್ನು



ಆಟೋನಗರದ ಫಲಾನುಭವಿಗಳಿಗೆ ತಿಳಿಸದೇ ಮತ್ತು ಸರಿಯಾದ ಮಾಹಿತಿ ನೀಡದೇ ತಮಗೆ ಇಷ್ಟಬಂದ ರೀತಿಯಲ್ಲಿ ರಚಿಸಿ, ಕಾರ್ಮಿಕರಿಗೆ ಅನ್ಯಾಯವೆಸಗಿದ್ದರು. ಈ ಬಗ್ಗೆ ಸಾಕಷ್ಟು ಬಾರಿ ಪೌರಾಯುಕ್ತರಿಗೆ ಮನವಿ ಮಾಡಿದರೂ, ಯಾವುದೇ ಪ್ರಯೋಜನವಾಗಿರುವುದಿಲ್ಲ.

ಇಲ್ಲಿನ ಆಟೋನಗರ ಮೂಲ ನಿವಾಸಿಗಳು ಜಿಲ್ಲಾಧಿಕಾರಿಗಳು ಮಧ್ಯಪ್ರವೇಶಿಸಿ ಇಲ್ಲಿನ ಸಮಸ್ಯೆಗಳನ್ನು ಸರಿಪಡಿಸುವಂತೆ ಒತ್ತಾಯಿಸಲಾಗಿತ್ತು. ಅದರಂತೆ ಜೂನ್-8 ಸೋಮವಾರ ಜಿಲ್ಲಾಧಿಕಾರಿಗಳು ಆಟೋನಗರಕ್ಕೆ ಭೇಟಿ ನೀಡಿ, ದಾಖಲೆಗಳನ್ನು ಪರಿಶೀಲಿಸಿ, ಮರು ಸರ್ವೆ ಮಾಡಿ ಇಲ್ಲಿನ ಮೂಲ ನಿವಾಸಿಗಳು ನಾಲ್ಕು ದಶಕಗಳ ಕಾಲ ಎದುರಿಸುತ್ತಿದ್ದ ಸಮಸ್ಯೆಗಳಿಗೆ ಜಿಲ್ಲಾಧಿಕಾರಿಗಳು ಸ್ಪಂದಿಸಿ, ಎಲ್ಲಾ ಮೂಲ ಸದಸ್ಯರಿಗೆ ನ್ಯಾಯ ಒದಗಿಸಲು ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಆಟೋನಗರದ ಮೂಲನಿವಾಸಿಗಳಾದ ಹುಸೇನಸಾಬ್, ಕಟ್ಟಾ ರಾಜ, ಬಿ. ಪ್ರಕಾಶ, ಡಿ.ಎಲ್. ಮೇರಿ, ಆರೋಗ್ಯ ಮೇರಿ, ಚಾಂದ್, ಗೌಸ್ ಪೀರ್, ಖಲೀಲ್ ಟಿಂಕರ್, ಸಲೀಂ ಟಿಂಕರ್, ಭಾಷಾ ಲಾರಿ ಮೆಕ್ಯಾನಿಕ್, ಬಿ. ಶ್ರೀನಿವಾಸ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಮೆಟ್ರಿಕ್ ನಂತರದ ವಸತಿ ನಿಲಯಕ್ಕೆ ಪ್ರವೇಶ

ಬಾಗಲಕೋಟೆ: ಜಿಲ್ಲೆಯ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ಬಾಲಕ, ಬಾಲಕಿಯರ ವಸತಿ ನಿಲಯಗಳಿಗೆ ಪಿಯುಸಿ, ಐಟಿಐ ಹಾಗೂ ಡಿಪ್ಲೋಮಾ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶಕ್ಕೆ ಅಲ್ಪಸಂಖ್ಯಾತರ ಹಾಗೂ ಇತರೆ ಸಮುದಾಯಗಳಾದ ಪರಿಶಿಷ್ಟ ಜಾತಿ, ಪಂಗಡ, ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳ ಪೋಷಕರ ಆದಾಯ 2.5 ಲಕ್ಷ ಮೀರಿರಬಾರದು. ಅರ್ಜಿಯನ್ನು ವೆಬ್‌ಸೈಟ್ http://shp.karnataka.gov.in ಮೂಲಕ ಜೂನ್ 30 ರೊಳಗಾಗಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ತಾಲೂಕಾ ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿಗಳ ಕಾರ್ಯಾಲಯ ಬಾಗಲಕೋಟೆ, ಜಮಖಂಡಿ ಹಾಗೂ ಜಿಲ್ಲಾ ತಾಲೂಕಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ.

# ಭೂ ಸಂತ್ರಸ್ತ ರೈತರಿಗೆ ನ್ಯಾಯಯುತ ಪರಿಹಾರಕ್ಕೆ ಆಗ್ರಹಿಸಿ ಜೂನ್ 18ರಂದು ಬಳ್ಳಾರಿ ಬಂದ್‌ಗೆ ಕುಡುತಿನಿ ಆನಂದ್ ಕರೆ




**ಬೆಳಗಾವಿ ವಾರ್ತೆ ಬಳ್ಳಾರಿ:** ಕುಡಿತಿನಿ ಪ್ರದೇಶದ ಭೂ ಸಂತ್ರಸ್ತ ರೈತರಿಗೆ ನ್ಯಾಯಯುತ ಪರಿಹಾರ ನೀಡುವಂತೆ ಆಗ್ರಹಿಸಿ ಕಳೆದ 1267 ದಿನಗಳಿಂದ ನಿರಂತರ ಹೋರಾಟ ನಡೆಸುತ್ತಿರುವ ಭೂ ಸಂತ್ರಸ್ತರ ಹೋರಾಟ ಸಮಿತಿ ಹಾಗೂ ವಿವಿಧ ರೈತ, ಕಾರ್ಮಿಕ ಮತ್ತು ಕನ್ನಡಪರ ಸಂಘಟನೆಗಳು ಜೂನ್ 18ರಂದು ಬಳ್ಳಾರಿ ಬಂದ್‌ಗೆ ಕರೆ ನೀಡಿವೆ.

ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಪ್ರಜಾ ಪರಿವರ್ತನೆ ವೇದಿಕೆ ಜಿಲ್ಲಾಧ್ಯಕ್ಷರಾದ ಕುಡುತಿನಿ ಆನಂದ್ ಕುಮಾರ್ ಮಾತನಾಡಿ, ಭೂ ಸ್ವಾಧೀನ ಪ್ರಕ್ರಿಯೆಯಲ್ಲಿ ರೈತರಿಗೆ ಸಮರ್ಪಕ ಪರಿಹಾರ ದೊರೆಯದೆ ಅನ್ಯಾಯವಾಗಿದೆ ಎಂದು ಆರೋಪಿಸಿದರು.

ಜಿಲ್ಲಾ ನ್ಯಾಯಾಲಯವು ಎಕರೆಗೆ 1.10 ಕೋಟಿ ಪರಿಹಾರ ನಿಗದಿಪಡಿಸಿದ್ದರೂ, ಪರಿಹಾರ ವಿತರಣೆಯಲ್ಲಿ ತಾರತಮ್ಯ ನಡೆದಿದೆ ಎಂದು ದೂರಿದ ಅವರು, ಭೂ ಸಂತ್ರಸ್ತ ರೈತರಿಗೆ ನ್ಯಾಯ ದೊರಕಿಸುವ ಉದ್ದೇಶದಿಂದ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ತಿಳಿಸಿದರು.

ಈ ಹಿನ್ನೆಲೆಯಲ್ಲಿ ರೈತ ಸಂಘಟನೆಗಳು, ಕಾರ್ಮಿಕ ಸಂಘಟನೆಗಳು ಹಾಗೂ 20ಕ್ಕೂ ಹೆಚ್ಚು ವಿವಿಧ ಸಂಘ-ಸಂಸ್ಥೆಗಳ ಸಹಯೋಗದೊಂದಿಗೆ ಸ್ವಯಂಪ್ರೇರಿತ ಬಳ್ಳಾರಿ ಬಂದ್ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ರಾಜ್ಯದ ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆದಿದ್ದು, ಅದರ ವಿರುದ್ಧ ಜನಜಾಗೃತಿ ಮೂಡಿಸಲು ಬಂದ್ ನಡೆಸಲಾಗುತ್ತಿದೆ ಎಂದು ಆರೋಪಿಸಿದರು.

ಜಿಲ್ಲೆಯ ವ್ಯಾಪಾರಸ್ಥರು, ಅಂಗಡಿ ಮಾಲೀಕರು, ವಾಣಿಜ್ಯ ಸಂಸ್ಥೆಗಳು, ಚೇಂಬರ್ ಆಫ್ ಕಾಮರ್ಸ್, ಶಾಲಾ-ಕಾಲೇಜುಗಳು, ಚಿತ್ರಮಂದಿರಗಳು ಸೇರಿದಂತೆ ಎಲ್ಲಾ ವಲಯದ ಜನರು ಬಂದ್‌ಗೆ ಬೆಂಬಲ ನೀಡುವಂತೆ ಮನವಿ ಮಾಡಿದರು. ಬಂದ್‌ನಲ್ಲಿ ಸುಮಾರು 2 ಸಾವಿರದಿಂದ 3 ಸಾವಿರ ಜನರು ಭಾಗವಹಿಸುವ ನಿರೀಕ್ಷೆಯಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬಸವರಾಜ್, ಚಾಣಪ್ಪ, ಕೃಷ್ಣಪ್ಪ, ಜಂಗ್ಲಿಸಾಬ್, ಬಾಬು, ರಮೇಶ್, ಹುಸೇನ್ನಪ್ಪ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು. ಸಿಐಟಿಯು, ಎಐಟಿಯುಸಿ, ಎಐಯುಟಿಯುಸಿ, ಕರ್ನಾಟಕ ಪ್ರಾಂತ ರೈತ ಸಂಘ ಸೇರಿದಂತೆ ವಿವಿಧ ರೈತ, ಕಾರ್ಮಿಕ ಹಾಗೂ ಕನ್ನಡಪರ ಸಂಘಟನೆಗಳ ಪ್ರತಿನಿಧಿಗಳು ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದರು.

# LPG ಸಿಲಿಂಡರ್ ಬೆಲೆ ಏರಿಕೆ: ವರದಿ ಕೇಳಿದ ಸಿಎಂ ಡಿ.ಕೆ. ಶಿವಕುಮಾರ್



**ಬೆಳಗಾವಿ ವಾರ್ತೆ ಬೆಂಗಳೂರು:** ಎಲ್‌ಪಿಜಿ (LPG) ಬೆಲೆ ಏರಿಕೆ ಕುರಿತು ಅಧಿಕಾರಿಗಳಿಂದ ವರದಿ ಕೇಳಿರುವುದಾಗಿ ಸಿಎಂ ಡಿ ಕೆ ಶಿವಕುಮಾರ್ ತಿಳಿಸಿದರು. ಜೊತೆಗೆ ಕೈಗಾರಿಕಾ ಅನಿಲ ಹಾಗೂ ಕೈಗಾರಿಕಾ ಡೀಸೆಲ್ ದರಗಳು ಆತಂಕಕಾರಿ ಮಟ್ಟದಲ್ಲಿ ಏರಿಕೆಯಾಗಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದರು.

ಕೇಂದ್ರ ಸರ್ಕಾರವು 14.2 ಕೆಜಿ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್‌ಗೆ 29 ರೂಪಾಯಿ ಹೆಚ್ಚಳ ಮಾಡಿ ಆದೇಶ ಹೊರಡಿಸಿದೆ. ಜಾಗತಿಕ ಇಂಧನ ವೆಚ್ಚಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರಿ ತೈಲ ಮಾರುಕಟ್ಟೆ ಕಂಪನಿಗಳು ಒತ್ತಡ ಎದುರಿಸುತ್ತಿರುವ ಕಾರಣ, ಕಳೆದ ಮೂರು ತಿಂಗಳಲ್ಲಿ ಇದು ಎರಡನೇ ಬಾರಿ ದರ ಏರಿಕೆಯಾಗಿದೆ.

ಇಂದು ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಡಿ ಕೆ ಶಿವಕುಮಾರ್, ಎಲ್ ಪಿಜಿ ದರ ಏರಿಕೆ ಬಗ್ಗೆ ನಾನು ವರದಿ ಕೇಳಿದ್ದೇನೆ. ಅದಕ್ಕಿಂತಲೂ ಹೆಚ್ಚು ಕೈಗಾರಿಕಾ ಅನಿಲ ಮತ್ತು ಕೈಗಾರಿಕಾ ಡೀಸೆಲ್ ದರಗಳು ಆತಂಕಕಾರಿ ಪ್ರಮಾಣದಲ್ಲಿ ಏರಿಕೆ ಕಂಡಿವೆ. ಈ ಕುರಿತು ವರದಿ ಪಡೆಯುತ್ತಿದ್ದೇನೆ. ನಾಳೆ ಈ ವಿಷಯದ ಬಗ್ಗೆ ಮಾತನಾಡುತ್ತೇನೆ ಎಂದು ಹೇಳಿದರು.

ಪಶ್ಚಿಮ ಏಷ್ಯಾದಲ್ಲಿ ಸಂಘರ್ಷದಿಂದ ಜಾಗತಿಕ ಮಟ್ಟದಲ್ಲಿ ಎಲ್‌ಪಿಜಿ ದರಗಳು ಗಣನೀಯವಾಗಿ ಏರಿಕೆಯಾಗಿದ್ದರೂ, ಭಾರತದಲ್ಲಿ ಇನ್ನೂ ವಿಶ್ವದಲ್ಲೇ ಅತ್ಯಂತ ಕಡಿಮೆ ಅಡುಗೆ ಅನಿಲ ದರವಿದೆ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ.

ಇದೇ ವರ್ಷದ ಮಾರ್ಚ್ 7ರಂದು ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು 60 ರೂಪಾಯಿ ಹೆಚ್ಚಿಸಲಾಗಿತ್ತು. ಇದೀಗ ಮತ್ತೊಮ್ಮೆ 29 ರೂಪಾಯಿ ಏರಿಕೆ ಮಾಡಲಾಗಿದೆ.

ಇತ್ತೀಚಿನ ಪರಿಷ್ಕರಣೆಗೆ ಮುನ್ನ, ಸರ್ಕಾರಿ ತೈಲ ಮಾರುಕಟ್ಟೆ ಕಂಪನಿಗಳು ಮಾರಾಟವಾಗುವ ಪ್ರತಿಯೊಂದು ಎಲ್‌ಪಿಜಿ ಸಿಲಿಂಡರ್ ಮೇಲೂ ಸುಮಾರು 703 ರೂಪಾಯಿ ನಷ್ಟ ಅನುಭವಿಸುತ್ತಿದ್ದವು ಎಂದು ಅಂದಾಜಿಸಲಾಗಿದೆ.

# ಪಾಸ್ಟರ್ ಅಬ್ಸಲೋಮ್ ಬಂಡಿ ನೇತೃತ್ವದಲ್ಲಿ ಪರಿಸರ ದಿನಾಚರಣೆ: ಸಂಡೇ ಸ್ಕೂಲ್ ಮಕ್ಕಳಿಂದ ಸಸಿ ನೆಟ್ಟು ಪರಿಸರ ಕಾಳಜಿ ಪ್ರದರ್ಶನ

**ಬೆಳಗಾವಿ ವಾರ್ತೆ ಬಳ್ಳಾರಿ:** ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ನಗರದ ಕೋಟೆ ಪ್ರದೇಶದಲ್ಲಿರುವ ಆಲ್ ಸೌಲ್ಸ್ ತೆಲುಗು ಚರ್ಚಿನಲ್ಲಿ ಭಾನುವಾರ ಸಸಿ ನೆಡುವಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಚರ್ಚಿನ ಸಂಘದ ಪಾಸ್ಟರ್ ರೆವರೆಂಡ್ ಅಬ್ಸಲೋಮ್ ಬಂಡಿ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಂಡೇ ಸ್ಕೂಲ್ ಮಕ್ಕಳು ಉತ್ಸಾಹದಿಂದ ಪಾಲ್ಗೊಂಡು ವಿವಿಧ ಜಾತಿಯ ಸಸಿಗಳನ್ನು ನೆಟ್ಟು ಪರಿಸರ ಸಂರಕ್ಷಣೆಯ ಕುರಿತು ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪಾಸ್ಟರ್ ರೆವರೆಂಡ್ ಅಬ್ಸಲೋಮ್ ಬಂಡಿ, ಪರಿಸರ ರಕ್ಷಣೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದ್ದು, ಮಕ್ಕಳಲ್ಲಿ ಬಾಲ್ಯದಿಂದಲೇ ಪರಿಸರದ ಬಗ್ಗೆ ಕಾಳಜಿ ಮತ್ತು ಜಾಗೃತಿ ಬೆಳೆಸುವುದು ಅತ್ಯಗತ್ಯ ಎಂದು ಹೇಳಿದರು. ಮರಗಳನ್ನು ನೆಟ್ಟು ಬೆಳೆಸುವ ಮೂಲಕ ಮುಂದಿನ ಪೀಳಿಗೆಗೆ ಉತ್ತಮ ಪರಿಸರ ವನ್ನು ಉಳಿಸಿಕೊಡಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸಂಡೇ ಸ್ಕೂಲ್ ಶಿಕ್ಷಕರಾದ ಶೋಭಾರಾಣಿ, ಮೇರಿ ಶಿಖಾಮಣಿ, ಮಾರ್ಗರೇಟ್, ಸುವರ್ಣ,



ಸುಧಾಕರ್ ಹಾಗೂ ಸಂಘದ ಪದಾಧಿಕಾರಿಗಳಾದ ಶಾಮ್ ಸುಂದರ್, ಕಿರಣ್ ಸುಹಾಸ್, ಚರ್ಚ್ ಸದಸ್ಯರಾದ ವಿಜಯ್ ಕುಮಾರ್, ಗ್ಯಾಬ್ರಿಯಲ್ ರಾಜು ಸೇರಿದಂತೆ ಸಂಡೇ ಸ್ಕೂಲ್ ಮಕ್ಕಳು ಮತ್ತು ಸಂಘದ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ನೇರಗುತ್ತಿಗೆ ಮೇಲೆ ವಿಶೇಷ ಶಿಕ್ಷಕರ ನೇಮಕ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಪ್ರಸಕ್ತ ಸಾಲಿನಲ್ಲಿ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ ವಿಕಲಚೇತನ ಮಕ್ಕಳಿಗಾಗಿ ಸಮನ್ವಯ ಶಿಕ್ಷಣ ಕಾರ್ಯಚಟುವಟುಕೆಗಳನ್ನು ಅನುಷ್ಠಾನಗೊಳಿಸಲು ಬ್ಲಾಕ ಹಂತದಲ್ಲಿ ಖಾಲಿ ಇರುವ ವಿಶೇಷ ಸಂಪನ್ಮೂಲ ಶಿಕ್ಷಕರ (ಬಿಐಇಆರ್‌ಟಿ) ಹುದ್ದೆಗಳನ್ನು ತಾತ್ಕಾಲಿಕವಾಗಿ ನೇರಗುತ್ತಿಗೆ ಮೂಲಕ ವಿಶೇಷ ಶಿಕ್ಷಕರ ಸೇವೆಯನ್ನು ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಗಿದೆ.

ಹುದ್ದೆಗಳು ತಾತ್ಕಾಲಿಕವಾಗಿ ಒಂದು ವರ್ಷದವರೆಗೆ ನೇಮಕ ಮಾಡಿಕೊಳ್ಳಲಾಗುತ್ತಿದೆ. ಜಿಲ್ಲೆಯಲ್ಲಿ 8 ಪ್ರೌಢಶಾಲೆ, 2 ಪ್ರಾಥಮಿಕ ಸೇರಿ ಒಟ್ಟು 10 ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ.

ಪ್ರೌಢವಿಭಾಗಕ್ಕೆ ವಿಶೇಷ ಬಿಇಡಿ ಹಾಗೂ ಪ್ರಾಥಮಿಕ ವಿಭಾಗಕ್ಕೆ ವಿಶೇಷ ಡಿಇಡಿಯೊಂದಿಗೆ ಆರ್‌ಸಿಐ ನಂಬರ ಹೊಂದಿರುವ ಅರ್ಹ ಅಭ್ಯರ್ಥಿಗಳು ಜೂನ್ 10 ರಂದು ಸಂಜೆ 4 ಗಂಟೆಯ ಒಳಗೆ ಅಗತ್ಯ ದಾಖಲೆಗಳೊಂದಿಗೆ ಜಿಲ್ಲಾ ಸಮಗ್ರ ಶಿಕ್ಷಣ ಕರ್ನಾಟಕ ಕಚೇರಿ ರೂನಂ.36 ಜಿಲ್ಲಾಡಳಿತ ಭವನ, ನವನಗರ, ಬಾಗಲಕೋಟೆ ಇವರಿಗೆ ಅರ್ಜಿ ಸಲ್ಲಿಸುವಂತೆ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮೊನಂ.9448999383ಗೆ ಸಂಪರ್ಕಿಸಬಹುದಾಗಿದೆ.

# ಸಚಿವ ಎಂ. ಬಿ. ಪಾಟೀಲ ಜ್ಞಾನಯೋಗಾಶ್ರಮಕ್ಕೆ ಭೇಟಿ




**ಬೆಳಗಾವಿ ವಾರ್ತೆ ವಿಜಯಪುರ:** ನೂತನ ಸಂಪುಟದಲ್ಲಿ ಸಚಿವರಾದ ನಂತರ ಇದೇ ಮೊದಲ ಬಾರಿಗೆ ಇಂದು ಶನಿವಾರ ತವರು ಜಿಲ್ಲೆಗೆ ಆಗಮಿಸಿದ ಕೈಗಾರಿಕೆ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ. ಬಿ. ಪಾಟೀಲ ಅವರು ನೇರವಾಗಿ ನಗರದ ಶ್ರೀ ಸಿದ್ಧೇಶ್ವರ ಸ್ವಾಮೀಜಿಗಳ ಜ್ಞಾನಯೋಗಾಶ್ರಮಕ್ಕೆ ತೆರಳಿ ಪೂಜೆ ಸಲ್ಲಿಸಿ ಶ್ರೀಗಳಿಂದ ಆಶೀರ್ವಾದ ಪಡೆದರು.

ವೇದಾಂತ ಕೇಸರಿ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿಗಳ ಗದ್ದುಗೆಗೆ ಪೂಜೆ ಸಲ್ಲಿಸಿದ ಸಚಿವರನ್ನು ಆಶ್ರಮದ ಅಧ್ಯಕ್ಷ ಶ್ರೀ ಬಸವಲಿಂಗ ಸ್ವಾಮೀಜಿಯವರು ಶ್ರೀ ಸಿದ್ಧೇಶ್ವರ ಸ್ವಾಮೀಜಿಯವರು ರಚಿಸಿದ ಮೊದಲ ಕೃತಿ ವಚನ ಚಿಂತನ ನೀಡಿ ಆಶೀರ್ವದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ಬಸವಲಿಂಗ ಸ್ವಾಮೀಜಿ, 21 ವರ್ಷಗಳ ಹಿಂದೆ ಶ್ರೀ ಸಿದ್ಧೇಶ್ವರ ಸ್ವಾಮೀಜಿಗಳು ಇದೇ ದಿನದಂದು 9 ಜನರಿಗೆ ಸನ್ಯಾಸ ದೀಕ್ಷೆ ನೀಡಿದ್ದರು. ಇದೇ ದಿನ ಸಚಿವರು ಆಶ್ರಮಕ್ಕೆ ಭೇಟಿ ನೀಡಿದ ಯೋಗಾಯೋಗ ಬಂದಿದೆ. ನನ್ನ ಜೀವಮಾನದಲ್ಲಿ ಬೇಸಿಗೆಯಲ್ಲೂ ಹಳ್ಳಗಳು ತುಂಬಿ ಹರಿಯುತ್ತಿರುವುದನ್ನು ಕಂಡು ಸಂತಸವಾಗಿದೆ. ಇದಕ್ಕೆ ಸಚಿವ ಎಂ. ಬಿ. ಪಾಟೀಲ ಅವರು ಕೈಗೊಂಡಿರುವ ನೀರಾವರಿ ಯೋಜನೆಗಳು ಕಾರಣವಾಗಿವೆ. ಸಚಿವರು ಶ್ರೀ ಸಿದ್ಧೇಶ್ವರ ಸ್ವಾಮೀಜಿಗಳ ಮಾತನ್ನು ಕಟ್ಟುನಿಟ್ಟಾಗಿ ಪಾಲಿಸುತ್ತಿರುವ ಅಪ್ಪಟ ಭಕ್ತರಾಗಿದ್ದಾರೆ. ಶ್ರೀಗಳು ಹೇಳಿದಂತೆ ಎಂ. ಬಿ. ಪಾಟೀಲರು ಜನಮನದಲ್ಲಿ ಯಾವಾಗಲೂ ಜಲಸಂಪನ್ಮೂಲ ಸಚಿವರಾಗಿ ಉಳಿದಿದ್ದಾರೆ. ಕೊಟ್ಟ ಖಾತೆಯನ್ನು ಸಮರ್ಥವಾಗಿ ನಿಭಾಯಿಸುವ ವ್ಯಕ್ತಿತ್ವ ಅವರಾಗಿದ್ದು, ಇನ್ನೂ ಉನ್ನತ ಸ್ಥಾನಕ್ಕೇರಲಿ ಎಂದು ಆಶೀರ್ವದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಎಂ. ಬಿ. ಪಾಟೀಲ, ನನ್ನ ಜೀವನವಿಡೀ ಶ್ರೀ ಸಿದ್ಧೇಶ್ವರ ಸ್ವಾಮೀಜಿಗಳ ಆಶಯದಂತೆ ಕೆಲಸ ಮಾಡುತ್ತೇನೆ. ಶ್ರೀ ಸಿದ್ಧೇಶ್ವರ ಸ್ವಾಮೀಜಿ ಆಶೀರ್ವಾದದಿಂದ ಜನಸೇವೆ, ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗಿದೆ. ಅವರ ಕಿವಿಮಾತಿನಂತೆ ಚಾಚೂ ತಪ್ಪದೆ ಪಾಲಿಸುತ್ತ ರಾಜ್ಯದ ಅಭಿವೃದ್ಧಿಗೆ ಸಮಯ ಮೀಸಲಿಟ್ಟಿದ್ದೇನೆ. ಶ್ರೀಗಳ ಆಶೀರ್ವಾದ ನನಗೆ ಕಾಯಕ ಮಾಡಲು ಸ್ಫೂರ್ತಿಯಾಗಿದ್ದು, ಈಗ ಮಾಡುತ್ತಿರುವ ಕೆಲಸ ಕಾರ್ಯಗಳ ಬಗ್ಗೆ ನನಗೆ ಸಂತೃಪ್ತಿ ಇದೆ. ಸಾರ್ವಜನಿಕ ಜೀವನದಲ್ಲಿ ಸದಾ ನನ್ನ ಬೆನ್ನುತಟ್ಟಿ ಪ್ರೋತ್ಸಾಹಿಸುತ್ತಾ, ಮಾರ್ಗದರ್ಶನ ನೀಡಿದ ಮಹಾನ್ ಸಂತ, ಜ್ಞಾನಯೋಗಿ ಶ್ರೀ ಸಿದ್ಧೇಶ್ವರ ಮಹಾಸ್ವಾಮಿಗಳವರು ನಡೆದಾಡಿದ ಪುಣ್ಯಭೂಮಿಗೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿ ಗುರುಗಳ ಆಶೀವಾರ್ದವನ್ನು ಪಡೆದು ಧನ್ಯನಾಗಿದ್ದೇನೆ. ಬೆಂಗಳೂರಿನಿಂದ ಬಂದು ನೇರವಾಗಿ ಆಶ್ರಮಕ್ಕೆ ಮೊದಲ ಭೇಟಿ ನೀಡಿದ್ದೇನೆ. ಶ್ರೀಗಳು ಮತ್ತು ಬಸವಾದಿ ಶರಣರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದ್ದೇನೆ. ಜೀವನಪೂರ್ತಿ ಶ್ರೀಗಳ ಆಶಯದಂತೆ ನಡೆಯುತ್ತೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಮೃತಾನಂದ ಸ್ವಾಮೀಜಿ ಬಾಲಗಾಂವ, ಹರ್ಷಾನಂದ ಸ್ವಾಮೀಜಿ, ಪ್ರಸಾದ ಸ್ವಾಮೀಜಿ, ಜಗನು ಮಹಾರಾಜ, ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಗಂಗಾಧರ ಸಂಬಣ್ಣಿ, ಮುಖಂಡರಾದ ಸಂಗು ಸಜ್ಜನ, ವಿ. ಸಿ. ನಾಗಠಾಣ, ಮಲ್ಲಿಕಾರ್ಜುನ ಹಳ್ಳದ, ಪಿ. ಎಸ್. ಬಿರಾದಾರ, ಘನಶ್ಯಾಮ ತೋಸ್ನಿವಾಲ, ಶಿವಾನಂದ ಸಂಖ, ವಿಠ್ಠಲಗೌಡ ಬಿರಾದಾರ ಮುಂತಾದವರು ಉಪಸ್ಥಿತರಿದ್ದರು.

ನಂತರ ಸಚಿವರು ಬಿ.ಎಲ್.ಡಿ.ಇ ಸಂಸ್ಥೆಯ ಶ್ರೀಮತಿ ಬಂಗಾರಮ್ಮ ಸಜ್ಜನ ಆವರಣದಲ್ಲಿರುವ ಸಂಸ್ಥೆಯ ಪ್ರಾತಃ ಸ್ಮರಣೀಯರಾದ ದಿ. ಶ್ರೀ ಬಿ. ಎಂ. ಪಾಟೀಲ, ವಚನ ಪಿತಾಮಹಡಾ. ಫ. ಗು. ಹಳಕಟ್ಟಿ ಸಮಾಧಿ, ಶ್ರೀ ಬಂಥನಾಳ ಶಿವಯೋಗಿಗಳ ದೇವಸ್ಥಾನ ಹಾಗೂ 770 ಅಮರಗಣಂಗಳ ಲಿಂಗದ ಗುಡಿಗೆ ತೆರಳಿ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಬಿ.ಎಲ್.ಡಿ.ಇ ಸಂಸ್ಥೆಯ ನಿರ್ದೇಶಕ ಸಂಗು ಸಜ್ಜನ, ಡೀಮ್ಡ್ ವಿಶ್ವವಿದ್ಯಾಲಯದ ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ, ರಜಿಸ್ಟ್ರಾರ್ ಡಾ. ಆರ್. ವಿ. ಕುಲಕರ್ಣಿ, ಪ್ರಾಚಾರ್ಯೆ ತೇಜಸ್ವಿನಿ ವಲ್ಲಭ, ಹಿರಿಯ ಉಪಪ್ರಾಚಾರ್ಯ ಡಾ. ವಿಜಯಕುಮಾರ ಕಲ್ಯಾಣಪ್ಪಗೋಳ, ಉಪಪ್ರಾಚಾರ್ಯ ಡಾ. ರವಿ ಬಿರಾದಾರ, ಸಂಸ್ಥೆಯ ಆಡಳಿತಾಧಿಕಾರಿಗಳಾದ ಎಸ್. ಎ. ಬಿರಾದಾರ (ಕನ್ನಾಳ), ವಿಲಾಸ ಬಗಲಿ, ಐ. ಎಸ್. ಕಾಳಪ್ಪನವರ, ಹಳಕಟ್ಟಿ ಸಂಶೋಧನ ಕೇಂದ್ರದ ಕಾರ್ಯದರ್ಶಿ ಡಾ. ಎಂ. ಎಸ್. ಮದಭಾವಿ ಮುಂತಾದವರು ಇದ್ದರು.

# ವಯೋನಿವೃತ್ತ ಶಿಕ್ಷಕರ ಬೀಳ್ಕೊಡುಗೆ ಸಮಾರಂಭ ಹಾಗೂ ಸನ್ಮಾನ



**ಬೆಳಗಾವಿ ವಾರ್ತೆ ಕೊಲ್ಹಾರ:** ತಾಲೂಕಿನ ಹಣಮಾಪುರ ಗ್ರಾಮದ ಗ್ರಾಮೀಣ ವಿದ್ಯಾವರ್ಧಕ ಪ್ರೌಢ ಶಾಲಾ ಆವರಣದಲ್ಲಿ ಸೇವಾ ನಿವೃತ್ತಿ ಶಿಕ್ಷಕರ ಬೀಳ್ಕೊಡುಗೆ ಸಮಾರಂಭ ಶನಿವಾರ ಬಹಳ ವಿಜೃಂಭಣೆಯಿಂದ ಜರುಗಿತು.

ಹಣಮಾಪುರ ಗ್ರಾಮೀಣ ವಿದ್ಯಾವರ್ಧಕ ಪ್ರೌಢ ಶಾಲೆಯ ಸೇವಾ ನಿವೃತ್ತಿಯನ್ನು ಹೊಂದಿದ ಮುಖ್ಯೋಪಾಧ್ಯಾಯರಾದ ಆರ್.ಎಸ್.ತುಂಗಳ್ (36 ವರ್ಷ ಸೇವೆ ),ಸಹ ಶಿಕ್ಷಕರಾದ ಎಂ.ಎಸ್. ದೇಸಾಯಿ (34ವರ್ಷ ಸೇವೆ ), ಅಟೆಂಡರ್ ಎಂ.ಐ.ಕಂಬೋಗಿ (37 ವರ್ಷ ಸೇವೆ ),ಇವರು ಪ್ರೌಢ ಶಾಲೆಯಲ್ಲಿ ಸುದೀರ್ಘ ವರ್ಷಗಳ ಕಾಲ ಸೇವೆ ಸಲ್ಲಿಸಿ ಹಾಗೂ ಶಿಕ್ಷಕರಾಗಿ ಸೇವೆ ಸಲ್ಲಿಸಿದ ಗುರುಗಳಿಗೆ ಗೌರವ ಸಲ್ಲಿಸುವ ಅರ್ಥಪೂರ್ಣ ಕಾರ್ಯಕ್ರಮ ಜರುಗಿತು.

ಈ ಕಾರ್ಯಕ್ರಮದಲ್ಲಿ ಊರಿನ ಗ್ರಾಮಸ್ಥರಿಂದ ಅವರಿಗೆ ಸ್ವಾಗತ ಮಾಡುವ ಮೂಲಕ ಅವರಿಗೆ ಸನ್ಮಾನಿಸಿ, ಭವಿಷ್ಯದ ಜೀವನಕ್ಕೆ ಶುಭ ಹಾರೈಸಲಾಯಿತು.

ಗ್ರಾಮಸ್ಥರು ಶಿಕ್ಷಕರನ್ನು ಟ್ರ್ಯಾಕ್ಟರ್ ಮೆರವಣಿಗೆ ಮೂಲಕ ಹಣಮಾಪುರ ಗ್ರಾಮಮದ ವಿವಿಧ ಬೀದಿಗಳಲ್ಲಿ ಟ್ರ್ಯಾಕ್ಟರ್ ಡಿ ಜೆ ಸಾಂಗ್ ಮೂಲಕ ಮೆರವಣಿಗೆ ನಡೆಸಿದರು,ಗ್ರಾಮಸ್ಥ ರಿಂದ ಹೂಮಳೆ ಹರಿಸಿ ಆಶೀರ್ವಾದ ಮಾಡಿದರು ಗ್ರಾಮದಲ್ಲಿ ಹಬ್ಬದ ವಾತಾವರಣ ಸೃಷ್ಟಿಯಾಗಿತ್ತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಸಾಹಿತಿ ಹಾಗೂ ಶಿಕ್ಷಕ ಅಶೋಕ್ ಹಂಚಿಲಿ ಮಾತನಾಡಿ,

37 ವರ್ಷಳ ಕಾಲ ಹಣಮಾಪುರ ಗ್ರಾಮದಲ್ಲಿ ಆರ್.ಎಸ್.ತುಂಗಳ, ಎಂ.ಎಸ್. ದೇಸಾಯಿ ಹಾಗೂ ಎಂ.ಐ.ಕಂಬೋಗಿಯವರು ಪ್ರಾಮಾಣಿಕತೆ ಮತ್ತು ನಿಷ್ಠೆತೆಯಿಂದ ಮುದ್ದು ಮಕ್ಕಳೊಂದಿಗೆ,ಮಕ್ಕಳ ತರ ಬೆರೆತು, ಮಕ್ಕಳಿಗೆ ಪಾಲಕರ ಸ್ವರೂಪದ ಪ್ರೀತಿ ತೋರಿ ಕಾರ್ಯ ನಿರ್ವಹಿಸಿದ್ದಾರೆ. ಪ್ರತಿಯೊಂದು ಮಗವಿಗೂ ತಂದೆಯಂತೆ ಪ್ರೀತಿ ಹಾಗೂ ವಾತ್ಸಲ್ಯ ನೀಡಿ ತಮ್ಮ ಸ್ವಂತ ಮಕ್ಕಳಂತೆ ತಿಳಿಹೇಳಿ ಮಕ್ಕಳಿಗೆ ಮನ ಮುಟ್ಟುವಂತೆ ಪಾಠ ಭೋದಿಸುತ್ತಿದರು. ಹಾಗೂ ಅವರ ಸ್ವಭಾವ ಸತತವಾಗಿ 34 ರಿಂದ 37 ವರ್ಷಳ ಕಾಲ ಹಣಮಾಪುರ ಗ್ರಾಮದಲ್ಲಿಯೇ ಸೇವೆ ಸಲ್ಲಿಸಿದರು. ಯಾವದೇ ಒಂದು ದಿನವೂ ಕೂಡ ತಮ್ಮ ವಿಷಯದಲ್ಲಿ ಮಕ್ಕಳಿಗೆ ಕೊರತೆಯಾಗದಂತೆ ಪಾಠ ಭೋದಿಸಿ,ಗ್ರಾಮಸ್ಥರ ಹಾಗೂ ವಿದ್ಯಾರ್ಥಿಗಳ ಅಚ್ಚು ಮೆಚ್ಚಿನ ಶಿಕ್ಷಕಯಾಗಿ ಕಾರ್ಯನಿರ್ವಹಿದ್ದಾರೆ. ಗುರುಗಳು ಅತ್ಯಂತ ಶ್ರೇಷ್ಠರು ಮತ್ತು ಸಮಾಜದ ಬೆನ್ನೆಲುಬು ಅವರು ಕೇವಲ ಅಕ್ಷರ ಕಲಿಸುವುದಷ್ಟೇ ಅಲ್ಲ, ಅಜ್ಞಾನದ ಕತ್ತಲೆಯನ್ನು ಓಡಿಸಿ ಜ್ಞಾನದ ಬೆಳಕನ್ನು ತೋರುವವರು. ಅವರ ಮಾರ್ಗದರ್ಶನ ಮನುಷ್ಯನ ಜೀವನವನ್ನು ರೂಪಿಸುತ್ತದೆ , ಬಹಳ ಮಹತ್ವದಾದ ಕಾರ್ಯಕ್ರಮ ಇದಾಗಿದೆ ಎಂದು ಅವರು ಹೇಳಿದರು.

ಸನ್ಮಾನ ಸ್ವೀಕರಿಸಿ ನಿವೃತ ಮುಖ್ಯ ಶಿಕ್ಷಕ ಆರ್ ಎಸ್ ತುಂಗಳ ಮಾತನಾಡಿ, ನಾನು ಸುದೀರ್ಘ ವರ್ಷಗಳ ಕಾಲ ಸೇವೆ ಸಲ್ಲಿಸಲು ಹಣಮಾಪುರ ಗ್ರಾಮದ ಹಿರಿಯರ, ಸಂಸ್ಥೆಯ ಪದಾಧಿಕಾರಿಗಳು, ಶಿಕ್ಷಕರ, ಮಕ್ಕಳ ಸಹಕಾರ ಬಹಳ ದೊಡ್ಡದಿದೆ. ಬಹಳ ಕಷ್ಟಪಟ್ಟು ದುಡಿದು ಈ ಶಾಲೆಯನ್ನು ಅನುದಾನಕ್ಕೆ ಒಳಪಡಿಸಿ ಈ ಗ್ರಾಮಕ್ಕೆ ಮಾದರಿ ಶಾಲೆಯನ್ನು ಕಾಯಿಕೊಟ್ಟಿದ್ದೇವೆ . ನೌಕರಿಗೆ ತೆಗೆದುಕೊಂಡ ದಿ.ಕೋರಣ್ಣವರ, ರಂಗನಗೌಡ ಪಾಟೀಲ,ಹಣಮುಸಾಹುಕಾರ ಹಳ್ಳೂರ, ಎಂ ಎಂ ಕುಬಕಡ್ಡಿ ಸೇರಿದಂತೆ ಅನೇಕ ಗಣ್ಯರನ್ನು ಈ ವೇಳೆ ಸ್ಮರಿಸಿದರು. ಈ ಬಾರಿ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಶಾಲೆಗೆ 100 ಕ್ಕೆ 100 ಫಲಿತಾಂಶ ಲಭಿಸಿದೆ. ಇದಕ್ಕೆಲ್ಲ ನಮ್ಮ ಶಿಕ್ಷಕರ ಶ್ರಮ ಕಾರಣ. ಪ್ರೀತಿಯಿಂದ ಸನ್ಮಾನಿಸಿದ ಎಲ್ಲರಿಗೂ ಅನಂತ ಧನ್ಯವಾದಗಳು ಎಂದರು. ಈ ವೇಳೆ ನಿವೃತ್ತ ಪ್ರಾಚಾರ್ಯ ಡಿ ವಾಯ ಪಟ್ಟಣಶೆಟ್ಟಿ, ಶಂಕರ ಗೂಗಿಹಾಳ ಮಾತನಾಡಿದರು.

ಕಾರ್ಯಕ್ರಮದ ಸಾನಿಧ್ಯವನು ವೇ.ಮೂ ರುದ್ರಸ್ವಾಮಿ ಹಿರೇಮಠ ವಹಿಸಿದ್ದರು .ಅಧ್ಯಕ್ಷತೆ ಯನ್ನ ಸುಶಾಂತಗೌಡಶ ಪಾಟೀಲ( ಭೂದಾನಿಗಳು) ವಹಿಸಿದ್ದರು.ಉದ್ಘಾಟನೆಯನ್ನು ಕ್ಷೇತ್ರ ಶಿಕ್ಷಣಾಧಿಕಾರಿ ವಸಂತ ರಾಠೋಡ ನೆರವೇರಿಸಿದರು.ಮುಖ್ಯಅತಿಥಿಗಳಾಗಿ ಸಂಗಮೇಶ ಪೂಜಾರಿ , ವಿ.ಡಿ. ಕೊರಣ್ಣನವರ , ಸಾಹಿತಿ ಅಶೋಕ ಹಂಚಲಿ , ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗದವರು , ಗ್ರಾಮದ ಗುರು–ಹಿರಿಯರು, ಯುವಕರು ಮತ್ತು ಹಳೇಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಪ್ರತಿಯೊಂದು ಜೀವಿ ಅಸ್ತಿತ್ವಕ್ಕೆ ಪರಿಸರವೇ ಕಾರಣ: ಅಂಗಡಿ



**ಬೆಳಗಾವಿ ವಾರ್ತೆ ಜಮಖಂಡಿ:** ನಾವು ಪರಿಸರಕ್ಕೆ ಏನು ಕೊಡುತ್ತೇವೆ ಪರಿಸರ ಕೂಡ ವಾಪಸ ನಮಗೆ ಅದನ್ನೆ ಕೊಡಲಿದೆ. ಪರಿಸರಕ್ಕೆ ಹಾನಿ ಆಗುವಂತಹ ಕೆಲಸ ಮಾಡಿದರೆ ಪರಿಸರ ಕೂಡ ನಮ್ಮ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವಂತಹ ವಾತಾವರಣ ಸೃಷ್ಟಿಯಾಗಲಿದೆ ಎಂದು ಡಬ್ಲೂಟಿಪಿ ವಿಭಾಗದ ಮುಖ್ಯಸ್ಥ ದೀಪಕ ಅಂಗಡಿ ಹೇಳಿದರು.

ತಾಲೂಕಿನ ಹಿಪ್ಪರಗಿ–ಮೈಗೂರದ ನಿರಾಣಿ ಸಕ್ಕರೆ ಕಾರ್ಖಾನೆ ಘಟಕ–2ರಲ್ಲಿ ಜೂನ್–5 ವಿಶ್ವ ಪರಿಸರ ದಿನಾಚರಣೆ ನಿಮಿತ್ತ ಕಾರ್ಖಾನೆಯ ಈಟಿಪಿ ಆವರಣದಲ್ಲಿ ಸಸಿ ನೆಡುವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭೂಮಿ ಮೇಲಿನ ಪ್ರತಿಯೊಂದು ಜೀವಿಯ ಅಸ್ತಿತ್ವಕ್ಕೆ ಪರಿಸರವೇ ಮೂಲಕಾರಣ. ಮಾನವ ಸೇರಿದಂತೆ ಇತರೆ ಪ್ರಾಣಿ, ಪಕ್ಷಿ ಪ್ರತಿಯೊಂದು ಜೀವ ಸಂಕುಲವು ತನ್ನ ಆಹಾರ, ಗಾಳಿ, ನೀರು ಸೇರಿದಂತೆ ಎಲ್ಲ ಅಗತ್ಯಗಳಿಗೆ ಪರಿಸರವನ್ನೇ ಅವಲಂಭಿಸಿದೆ. ಇತ್ತೀಚಿನ ದಿನಗಳಲ್ಲಿ ಮನುಷ್ಯನು ತನ್ನ ದುರಾಸೆಗಾಗಿ ತನಗೆ ಅರಿವಿಲ್ಲದಂತೆ ಪ್ರಕೃತಿಯನ್ನು ನಾಶ ಮಾಡುತ್ತಿದ್ದಾನೆ. ಇದರ ಪರಿಣಾಮವಾಗಿ ಇಂದು ನಾವು ಸೇವಿಸುವ ಗಾಳಿ, ಕುಡಿವ ನೀರು ಮತ್ತು ಕೃಷಿ ಮಾಡುವ ಮಣ್ಣು ಸಂಪೂರ್ಣವಾಗಿ ಕಲುಷಿತಗೊಂಡಿದೆ. ಈ ಅಪಾಯವನ್ನು ತಡೆಯುವುದೇ ವಿಶ್ವಪರಿಸರ ದಿನದ ಮುಖ್ಯ ಉದ್ದೇಶವಾಗಿದೆ. ಅದಕ್ಕಾಗಿ ನಾವು ಇಂದಿನಿಂದಲೇ ಪರಿಸರ ಹಾಳು ಮಾಡುವುದನ್ನು ನಿಲ್ಲಿಸುವ ಮೂಲಕ ಪ್ರತಿಯೊಬ್ಬರೂ ತಮ್ಮ ಮನೆಯಂಗಳದಲ್ಲಿ ಗಿಡ–ಮರಗಳನ್ನು ನೆಟ್ಟು ಬೆಳೆಸುವ ಮೂಲಕ ಮುಂದಿನ ಪೀಳಿಗೆಗೆ ಹಸಿರು ಭೂಮಿಯನ್ನು ಕೊಡುಗೆಯಾಗಿ ನೀಡೋಣ ಎಂದರು.

ಕಾರ್ಖಾನೆ ಮುಖ್ಯಸ್ಥ ಅಧಿಕರಾವ ಪವಾರ ಮಾತನಾಡಿ, ನಮ್ಮ ದೈನಂದಿನ ಚಟುವಟಿಕೆಯಲ್ಲಿ ನಾವು ಬಳಸಿ ಬಿಸಾಕುವ ಪ್ಲಾಸ್ಟಿಕನಿಂದ ಪರಿಸರ ಮಾಲಿನ್ಯ ಮತ್ತು ನಮ್ಮ ಆರೋಗ್ಯ ಸಮಸ್ಯೆ ಉಂಟಾಗುತ್ತದೆ. ಪ್ಲಾಸ್ಟಿಕ್ ಮಣ್ಣಿನಲ್ಲಿ ಕರಗುವುದಿಲ್ಲ. ಇದು ನೂರಾರು ವರ್ಷಗಳವರೆಗೆ ಉಳಿದು ಮಣ್ಣಿನ ಫಲವತ್ತತೆ ಹಾಳು ಮಾಡುತ್ತದೆ. ಅದನ್ನು ಸುಟ್ಟರೆ ಅದರಿಂದ ಬಿಡುಗಡೆಯಾಗುವ ವಿಷಕಾರಿ ಹೊಗೆ ಭೂಮಿ ಮೇಲಿನ ಎಲ್ಲ ಜೀವಸಂಕುಲಕ್ಕೆ ಉಸಿರಾಟದ ತೊಂದರೆ ಉಂಟಾಗುತ್ತದೆ. ಕ್ಯಾನ್ಸರ್‌ನಂತಹ ಗಂಭೀರ ಕಾಯಿಗಲೆಗಳಿಗೆ ಕಾರಣವಾಗಬಹುದು. ಆದ್ದರಿಂದ ಪ್ಲಾಸ್ಟಿಕ ಬಳಕೆಯನ್ನು ಕಡಿಮೆ ಮಾಡಿ, ಬಟ್ಟೆ ಅಥವಾ ಕಾಗದ ಚೀಲಗಳಂತಹ ಪರಿಸರ ಸ್ನೇಹಿ ವಸ್ತುಗಳನ್ನು ಬಳಸುವುದರಿಂದ ಪರಿಸರ ರಕ್ಷಿಸಬೇಕಾಗಿದೆ ಎಂದರು.

ರಾಮಚಂದ್ರ ಕುಂಬಾರ, ಆಶೀಷಸಿಂಗ ಮಾತನಾಡಿದರು. ಇದೇ ಸಂದರ್ಭದಲ್ಲಿ ದುಂಡಪ್ಪ ಕೊಂಕಣಿ, ಕಿಶೋರ ಪರಾಂಡೆ, ಸಂತೋಷ ಶಿಂದೆ, ವಿವೇಕ ಪಾಲಭಾಂವಿ, ಟಿ.ಎಂ.ಚಂದ್ರಶೇಖರ, ಮುಸ್ತಫಾ ಜಾಗೀರದಾರ, ಶಿವಾನಂದ ಗಾಡವಿ ಸಹಿತ ಹಲವರು ಇದ್ದರು. ಶಿವರಾಜ ಪುರಲಿ ಪ್ರಾರ್ಥಿಸಿದರು. ಶ್ರೀಶೈಲ ಪತ್ತಾರ ನಿರೂಪಿಸಿದರು.

# ಪ್ರಕೃತಿ ನೀಡಿದ ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ: ಅಸ್ಕಿ




**ಬೆಳಗಾವಿ ವಾರ್ತೆ ಜಮಖಂಡಿ:** ನಾವು ಆಚರಿಸಿದ ವಿಶ್ವಪರಿಸರ ದಿನಾಚರಣೆ ಜೂನ್ 5ಕ್ಕೆ ಮಾತ್ರ ಸಿಮೀತವಾಗಬಾರದು ಅದು ಸದಾ ಕಾಲ ಪರಿಸರ ವನ್ನು ಸಂರಕ್ಷಿಸುವ ಪರಿಸರದ ಹಬ್ಬವಾಗಬೇಕು. ಪ್ರಕೃತಿ ಮಾತೆಯನ್ನು ಪ್ರೀತಿಸಿ ಆರಾಧಿಸುವ ಮನಸ್ಥಿತಿಗಳ ವಾತಾವರಣ ಸೃಷ್ಠಿ ಆಗಬೇಕು ಎಂದು ಆರೋಗ್ಯ ಪರಿಶೀಲನಾ ಅಧಿಕಾರಿ ಮಲ್ಲಪ್ಪ ಅಸ್ಕಿ ಹೇಳಿದರು. ನಗರದ ಬಿ.ಎಲ್.ಡಿ.ಇ.ಸಂಸ್ಥೆಯ ಪಬ್ಲಿಕ ಸ್ಕೂಲ್ ಆವರಣದಲ್ಲಿ ವಿಶ್ವಪರಿಸರ ದಿನಾಚರಣೆ ಕಾರ್ಯಕ್ರಮ ನಿಮಿತ್ತ ಹಸಿರೇ ಉಸಿರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ. ಪರಿಸರ ಸಂರಕ್ಷಣೆಗಾಗಿ ನಮ್ಮೆಲ್ಲರ ಹೋರಾಟದ ಹಾದಿ ಆಗಬೇಕಾಗಿದೆ. ಮನುಷ್ಯ ಹಾಗೂ ಪರಿಸರದ ನಡುವಿನ ಸಂಬಂಧ ಮತ್ತು ಯಾಂತ್ರಿಕತೆ ನೆಪದಲ್ಲಿ ಪ್ರಕೃತಿ ಮೇಲೆ ನಡೆಯುತ್ತಿರುವ ನಿರಂತರ ದೌರ್ಜನ್ಯ ನಡೆಯುತ್ತಿದ್ದು, ಕೆಲವು ಜೀವಂತ ಉದಾಹರಣೆಗಳು ನಮ್ಮೆಲ್ಲರ ಕಣ್ಮುಂದಿವೆ. ವಿಶ್ವ ಪರಿಸರ ದಿನಾಚರಣೆ ಕೇವಲ ಸಮಾರಂಭದಂತೆ ಆಚರಿಸದೇ ಒಂದು ಹಬ್ಬದಂತೆ ಆಚರಿಸಬೇಕು ಎಂದರು.

ಪ್ರಾಂಶುಪಾಲಕಿ ಸಾವಿತ್ರಿ ಕಕ್ಕೇರಿ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಉಪನ್ಯಾಸಕ ಶಿವಪ್ಪ ವೆಂಕಟಾಪೂರ ಸಹಿತ ಹಲವರು ಇದ್ದರು.

# ಪರಿಸರ ನಾಶದಿಂದ ಸಮೃದ್ಧ ಅರಣ್ಯ ಸಂಪತ್ತಿಗೆ ಆಪತ್ತು : ಪ್ರೇಮಾ

**ಬೆಳಗಾವಿ ವಾರ್ತೆ ಜಮಖಂಡಿ:** ವಿಶ್ವದಲ್ಲಿ ಪರಿಸರ ಸಂರಕ್ಷಣೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಪರಿಸರ ನಾಶದಿಂದ ಸಮೃದ್ಧಿ ಅರಣ್ಯ ಸಂಪತ್ತಿಗೆ ಆಪತ್ತು ಎದುರಾಗುವ ಮೂಲಕ ವಿಕೋಪಗಳಿಗೆ ಕಡಿವಾಣ ಹಾಕುವಲ್ಲಿ ನಾವೆಲ್ಲರೂ ವಿಫಲರಾಗುತ್ತಿದ್ದೇವೆ ಎಂದು ಮುಖ್ಯಶಿಕ್ಷಕಿ ಪ್ರೇಮಾ ಉಳ್ಳಿಗಡ್ಡಿ ಹೇಳಿದರು.

ತಾಲೂಕಿನ ಹುನ್ನೂರ ಗ್ರಾಮ ವೀಣಾ ಆಂಗ್ಲ ಮಾಧ್ಯಮ ಪೂರ್ವ ಪ್ರಾಥಮಿಕ ಶಾಲೆಯಲ್ಲಿ ವಿಶ್ವಪರಿಸರ ದಿನಾಚರಣೆ ಆಚರಣೆ ನಿಮಿತ್ತ ವಿದ್ಯಾರ್ಥಿಗಳಿಂದ ಪರಿಸರ ಕಾಳಜಿ ವಿಷಯ ಕುರಿತು ಮಾತನಾಡಿದ ಅವರು, ಇಂದಿನ ಮಕ್ಕಳಲ್ಲಿ ಪರಿಸರ ಜಾಗೃತಿ ಸಹಿತ ರಕ್ಷಣೆ ಮಹತ್ವ ತಿಳಿಸಿ ಕೊಡಬೇಕಾಗಿದೆ. ಕೇವಲ ಮಾತುಗಳಿಂದ ಪರಿಸರ ರಕ್ಷಣೆ ಮಾಡಲು ಸಾಧ್ಯವಿಲ್ಲ, ಕೃತಿಯಿಂದ ಪರಿಸರ ರಕ್ಷಣೆ ಮಾಡುವ ಮನಸ್ಥಿತಿಗಳು ಅಗತ್ಯವಾಗಿದೆ. ಇಂದಿನ ದಿನಮಾನದಲ್ಲಿ ವಿದ್ಯಾರ್ಥಿಗಳಿಂದ ಪರಿಸರ ರಕ್ಷಣೆ ಮಾಡಲು ಸಾಧ್ಯತೆ ಇದೆ ಎಂದರು.

ಶಾಲಾಮಕ್ಕಳಿಗೆ ಶಾಲಾ ಅವಧಿಯಲ್ಲಿ ವರ್ಷದಲ್ಲಿ ಒಂದು ದಿನ ಪರಿಸರ ಜಾಗೃತಿ ಮೂಡಿಸಿದರೇ ಸಾಲದು, ಕನಿಷ್ಠ ವಾರದಲ್ಲಿ ಒಂದು ಸಲವಾದರೂ ಪರಿಸರ ರಕ್ಷಣೆ ಜೊತೆಗೆ ಪರಿಸರ ವಿನಾಶದ ಕುರಿತು ಜಾಗೃತಿ ಮೂಡಿಸಬೇಕಾಗಿದೆ. ಪರಿಸರ ರಕ್ಷಣೆಯಲ್ಲಿ ಸಂಘ–ಸಂಸ್ಥೆಗಳು, ಸರಕಾರಿ ಇಲಾಖೆಗಳು, ಸಾರ್ವಜನಿಕ ವಲಯದ ಜೊತೆಗೆ ಶಿಕ್ಷಕರ ಪಾತ್ರ ಕೂಡ ಪ್ರಮುಖವಾಗಿದೆ. ಜಮಖಂಡಿ ತಾಲೂಕಿನಲ್ಲಿ ಶೈಕ್ಷಣಿಕ ವರ್ಷದಲ್ಲಿ 1.30 ಲಕ್ಷ ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದು, ಅದರಲ್ಲಿ ಶೇ.50 ರಷ್ಟು ವಿದ್ಯಾರ್ಥಿಗಳಲ್ಲಿ ಪರಿಸರ ರಕ್ಷಣೆ ಜಾಗೃತಿ ಮೂಡಿದರೇ ವಿಶ್ವಪರಿಸರ ದಿನಾಚರಣೆ ಹೆಚ್ಚಿನ ಮಹತ್ವ ಬರಲಿದೆ ಎಂದರು.




ಸಹ ಶಿಕ್ಷಕಿ ಸುರೇಖಾ ರಬಕವಿ ಮಾತನಾಡಿ, ಪ್ರಸಕ್ತ ಜೂನ ತಿಂಗಳಲ್ಲಿ ಅಂತ್ಯದವರೆಗೆ ಶಾಲೆಯ ಆವರಣದಲ್ಲಿ ಪ್ರತಿಯೊಂದು ಮಗುವಿನ ಹೆಸರಿನಲ್ಲಿ ಸಸಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಪತ್ರಕರ್ತ, ಸಂಸ್ಥೆ ಅಧ್ಯಕ್ಷ ಮಲ್ಲೇಶ ಆಳಗಿ, ಉಪಾಧ್ಯಕ್ಷ ಮಲ್ಲಪ್ಪ ವಾಂಗಿ, ಕಾರ್ಯದರ್ಶಿ ಹಣಮಂತ ಭೂಷನ್ನವರ, ಖಜಾಂಚಿ ವಿಜಯಕುಮಾರ ಶಿವಸಿಂಪಿ, ಸಹಶಿಕ್ಷಕಿ ರುಕ್ಕಯ್ಯ ಜಮಾದಾರ, ಬಿಸ್ಮಿಲಾ ಬೆಸಗಾರ ಸಹಿತ ಹಲವರು ಇದ್ದರು.

# ಕಾರು–ಬೈಕ್ ಮುಖಾಮುಖಿ ಡಿಕ್ಕಿ: ಬೈಕ್ ಸವಾರ ಸ್ಥಳದಲ್ಲೇ ಸಾವು

**ಬೆಳಗಾವಿ ವಾರ್ತೆ ಜಮಖಂಡಿ:** ತಾಲೂಕಿನ ಮದರಖಂಡಿ ಕ್ರಾಸ್ ಬಳಿ ಕಾರು & ಬೈಕ್ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾ ತದಲ್ಲಿ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿರುವ ದುರ್ಘಟನೆ ನಡೆದಿದೆ. ಲಭ್ಯ ಮಾಹಿತಿಯ ಪ್ರಕಾರ, ಬೈಕ್ ಸವಾರ ಬನಹಟ್ಟಿ ಕಡೆಯಿಂದ ಜಮಖಂಡಿ ಕಡೆಗೆ ಬರುತ್ತಿದ್ದ ವೇಳೆ, ಜಮಖಂಡಿಯಿಂದ ಬನಹಟ್ಟಿ ಕಡೆಗೆ ತೆರಳುತ್ತಿದ್ದ ಕಾರಿನೊಂದಿಗೆ ಮುಖಾಮುಖಿ ಡಿಕ್ಕಿ ಸಂಭವಿಸಿದೆ. ಡಿಕ್ಕಿಯ ತೀವ್ರತೆಗೆ ಬೈಕ್ ಸವಾರ ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ. ಮೃತ ಬೈಕ್ ಸವಾರನ ಗುರುತು ಇನ್ನೂ ಪತ್ತೆಯಾಗಿಲ್ಲ. ಅವರು ಯಾರು ಹಾಗೂ ಯಾವ ಊರಿನವರು ಎಂಬ ಮಾಹಿತಿ ಇನ್ನಷ್ಟೇ ತಿಳಿದು ಬರಬೇಕಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.



ಘಟನಾ ಸ್ಥಳಕ್ಕೆ ಜಮಖಂಡಿ ಗ್ರಾಮೀಣ ಪೊಲೀಸ್ ಠಾಣೆಯ ಅಪರಾಧ ವಿಭಾಗದ ಪಿಎಸ್ಐ ವಾಲೇಕರ ಹಾಗೂ ಪೊಲೀಸ್ ಸಿಬ್ಬಂದಿ ಸದಲಗಿ ಅವರ ನೇತೃತ್ವದ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದೆ. ಅಪಘಾತಕ್ಕೆ ನಿಖರ ಕಾರಣ ಏನು ಎಂಬುದು ಪೊಲೀಸ್ ತನಿಖೆಯಿಂದ ತಿಳಿದು ಬರಬೇಕಿದೆ. ಈ ಘಟನೆ ಸ್ಥಳೀಯರಲ್ಲಿ ಆತಂಕ ಮೂಡಿಸಿದ್ದು, ಮೃತರ ಗುರುತು ಹಾಗೂ ಅಪಘಾತದ ನಿಖರ ಕಾರಣ ಕುರಿತು ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

# ಅಥಣಿ ತಾಲೂಕಾ ಆಡಳಿತದಿಂದ ಐಎಫ್‌ಎಸ್‌ಸಿ ಸಾಧಕ ಬಸವರಾಜ ಕೆಂಪವಾಡ ಅವರಿಗೆ ಸನ್ಮಾನ




**ಬೆಳಗಾವಿ ವಾರ್ತೆ ಅಥಣಿ:** ದೇಶದ ಅತ್ಯಂತ ಕಠಿಣ ಪರೀಕ್ಷೆಗಳಲ್ಲಿ ಒಂದಾದ ಐಎಫ್‌ಎಸ್‌ಸಿ ಪರೀಕ್ಷೆಯಲ್ಲಿ ದೇಶಕ್ಕೆ ಪ್ರಥಮ ಸ್ಥಾನದಲ್ಲಿ ಉತ್ತೀರ್ಣರಾದ ಅಥಣಿ ತಾಲೂಕಿನ ಸವದಿ ಗ್ರಾಮದ ಬಸವರಾಜ ಕೆಂಪವಾಡ ಅವರ ನ್ನು ತಾಲೂಕಾ ಆಡಳಿತದ ವತಿಯಿಂದ ಸೋಮವಾರ ಸನ್ಮಾನಿಸಿ ಸತ್ಕರಿಸಲಾಯಿತು. ಅಥಣಿ ತಹಶೀಲ್ದಾರ ಕಚೇರಿಯಲ್ಲಿ ನಡೆದ ಸರಳ ಸಮಾರಂಭದಲ್ಲಿ ತಾಲೂಕಾ ದಂಡಾಧಿಕಾರಿ ಹಾಗೂ ತಹಶೀಲ್ದಾರ ಸಿದರಾಯ ಬೋಸಗಿ ಹಾಗೂ ತಾಲೂಕಿನ ಎಲ್ಲ ಅಧಿಕಾರಿಗಳು ಸೇರಿ ಬಸವರಾಜ ಕೆಂಪವಾಡ ಅವರಿಗೆ ಸನ್ಮಾನಿಸಿ ಗೌರವಿಸಿದರು. ಈ ವೇಳೆ ಸನ್ಮಾನ ಸ್ವೀಕರಿಸಿ ಮಾತ ನಾಡಿದ ಬಸವರಾಜ ಕೆಂಪವಾಡ ಅವರು ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಸರಿ ಯಾದ ಮಾರ್ಗದರ್ಶನ ಸಿಕ್ಕರೆ ಯುಪಿ ಎಸ್‌ಸಿ ಐಎಫ್‌ಎಸ್‌ಸಿ ಅಂತಹ ಪರೀಕ್ಷೆ ಗಳನ್ನು ಪಾಸ ಮಾಡುವುದು ಕಷ್ಟವಲ್ಲ ನನ್ನ ಯಶಸ್ಸಿಗೆ ನನ್ನ ತಂದೆ ತಾಯಿ ಗುರುಗಳು ಮತ್ತು ಅಥಣಿ ತಾಲೂಕಿನ ಜನರ ಆಶೀರ್ವಾದವೇ ಕಾರಣ ಸಾಧ್ಯವಾದಷ್ಟು ಸಮಜಾಜಕ್ಕೆ ಒಳ್ಳೆದೆ ಮಾಡುವೆ ನಿಮ್ಮಂತ ಎಲ್ಲ ಹಿರಿಯ ಅಧಿಕಾರಿಗಳ ಮಾರ್ಗದರ್ಶನ ಪಡೆದು ಮುಂದೆ ಅರಣ್ಯ ಇಲಾಖೆಯಲ್ಲಿ ಒಳ್ಳೆಯ ಸೇವೆ ಸಲ್ಲಿಸುವ ಮೂಲಕ ಪರಿಸರ ಸಂರಕ್ಷಣೆಗೆ ನನ್ನ ಕೊಡುಗೆ ನೀಡುವೆ ಎಂದು ಹೇಳಿದರು.

ಇನ್ನೂ ತಹಶೀಲ್ದಾರ ಸಿದರಾಯ ಬೋಸಗಿ ಮಾತನಾಡಿ ಬಸವರಾಜ ಕೆಂಪವಾಡ ಅವರು ಐಎಫ್‌ಎಸ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವುದು ಇಡಿ ಅಥಣಿ ತಾಲೂಕಿಗೆ ಹಾಗೂ ಸವದಿ ಗ್ರಾಮಕ್ಕೆ ಹೆಮ್ಮೆಯ ವಿಷಯ ಅವರ ಸಾಧನೆ ಇತರ ವಿದ್ಯಾರ್ಥಿಗಳಿಗೆ ಸ್ಫೂರ್ತಿಯಾಗಲಿ ಕಠಿಣ ಪರಿಶ್ರಮ ಛಲ ಇದ್ದರೆ ಯಾವುದೇ ಗುರಿ ಮುಟ್ಟಲು ಸಾಧ್ಯ ಎಂಬುದನ್ನು ಬಸವರಾಜ ಕೆಂಪವಾಡ ಅವರು ತೋರಿಸಿ ಕೊಟ್ಟಿದ್ದಾರೆ ತಾಲೂಕಾ ಆಡಳಿತದಿಂದ ಪರವಾಗಿ ಅವರಿಗೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಸಿಪಿಐ ಸಂತೋಷ ಹಳ್ಳೂರ, ತಾಲೂಕಾ ಪಂಚಾಯತ ಕಾರ್ಯ ನಿರ್ವಾಹ ಶಿವಾನಂದ ಕಲ್ಲಾಪೂರ, ಗ್ರೇಡ್ 2 ತಹಶಿಲ್ದಾರರಾದ ಬಸವರಾಜ ಹೊಸಕೇರಿ,ಮಹಾದೇವ ಬಿರಾದರ,ವಲಯ ಅರಣ್ಯಾಧಿಕಾರಿ ರಾಕೇಶ ಅರ್ಜುನವಾಡ, ಕೃಷಿ ಇಲಾಖೆಯ ನಿಂಗನಗೌಡ ಬಿರಾದರ, ದರೇಪ್ಪ ಕೆಂಪವಾಡ, ಕಂದಾಯ ಇಲಾಖೆ ಸಿಬ್ಬಂದಿ, ಸೇರಿದಂತೆ ತಾಲೂಕಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿಶ್ವ ಪರಿಸರ ದಿನಾಚರಣೆ; ವನಮಹೋತ್ಸವ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ವಿಶ್ವ ಪರಿಸರ ದಿನ ಅಂಗವಾಗಿ ಬಸವೇಶ್ವರ ನಗರದ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ವನಮಹೋತ್ಸವ ಆಚರಿಸಲಾಯಿತು. ಶಾಲೆಯ ಆವರಣದಲ್ಲಿ ಸಸಿಗಳನ್ನು ನೆಡಲಾಯಿತು. ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ ಅವರು ಸಸಿಗೆ ನೀರುಣಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಪರಿಸರ ಉಳಿಸಿ, ಪರಿಸರ ಬೆಳೆಸಿ, ನಮ್ಮ ಭೂಮಿ ನಮ್ಮ ಜವಾಬ್ದಾರಿ, ಮುಂತಾದ ಘೋಷಣೆಗಳನ್ನು ಹೇಳುತ್ತಾ ಶುದ್ಧ ಗಾಳಿ, ಶುದ್ಧ ನೀರು, ಸ್ವಚ್ಛತೆ, ಪರಿಸರ ಸಂರಕ್ಷಣೆ, ಸುಂದರ ಪರಿಸರ ನಿರ್ಮಾಣ ಮಾಡುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಮಕ್ಕಳಲ್ಲಿ ಜಾಗೃತಿ ಮೂಡಿಸಿದರು. ಪರಿಸರ ಸಂರಕ್ಷಣೆ ಮಾಡಿ, ನಮ್ಮ ನಮ್ಮ ಪರಿಸರವನ್ನು ಸ್ವಚ್ಛವಾಗಿ ಇಟ್ಟುಕೊಂಡರೆ, ಈ ಭೂಮಿಯೇ ಸ್ವರ್ಗವಾಗುತ್ತದೆ. ಪರಿಸರ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸುವುದು. ಪ್ರಕೃತಿಯನ್ನು ಸಂರಕ್ಷಿಸಲು ಪ್ರೋತ್ಸಾಹಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು. ನಿವೃತ್ತ ವೈದ್ಯಾಧಿಕಾರಿ, ಹಿರಿಯರಾದ ಡಾ ವಿ. ಬಿ. ನಿಟಾಲಿ ಅವರು ಉತ್ತಮ ಆರೋಗ್ಯ ಹಾಗೂ ಪರಿಸರ ಸಂರಕ್ಷಣೆ ಕುರಿತು ಹಲವಾರು ಉಪಯುಕ್ತ ಮಾಹಿತಿಯನ್ನು ಹಂಚಿಕೊಂಡರು. ಶಾಲೆಯ ಹಿರಿಯ ಮುಖ್ಯ ಶಿಕ್ಷಕ ಡಾ ಎಚ್ ಬಿ ಕೊರವರ, ಶಿಕ್ಷಕಿಯರಾದ ಅಕ್ಕಮ್ಮ ವಿ. ಶೆಟ್ಟರ್ , ಶಕುಂತಲಾ ಜಿ ನವಲಗುಂದ, ಅನಸೂಯಾ ವೈ ಮರಕುಂಬಿ , ಸವಿತಾ ಪಿ ಮಗದೂರ, ಶ್ರೀದೇವಿ ಎಚ್ ಕುಲಕರ್ಣಿ, ವೀಣಾ ಪ್ರ. ಪಾಟೀಲ್, ಜ್ಯೋತಿ ಶಾ ಕೆಲದಿಮಠ, ಶಾಲೆಯ ಮಕ್ಕಳು, ಪಾಲಕರು, ಮುಂತಾದವರು ಉತ್ಸಾಹದಿಂದ ಭಾಗವಹಿಸಿದ್ದರು. ಹೊರಕೇರಿ ಮಾಸ್ತರ್ ಶಿಕ್ಷಣ ಪ್ರತಿಷ್ಠಾನದ ವತಿಯಿಂದ ಹಿರಿಯ ಮುಖ್ಯ ಶಿಕ್ಷಕರಾಗಿ ಪದೋನ್ನತಿ ಹೊಂದಿದ ಡಾ ಎಚ್ ಬಿ ಕೊರವರ ಅವರಿಗೆ ಗ್ರಂಥ ನೀಡಿ , ಮಾಲಾರ್ಪಣೆ ಮಾಡಿ ಆತ್ಮೀಯವಾಗಿ, ಹುತ್ಪೂರ್ವಕವಾಗಿ ಗೌರವಿಸಿದರು.

# ವಿದ್ಯಾರ್ಥಿಗಳು ಕಠೀಣ ಶ್ರಮದಿಂದ ಹೆಚ್ಚಿನ ಸಾಧನೆ ಮಾಡಿ ಉನ್ನತ ಹುದ್ದೆ ಅಲಂಕರಿಸಿ

**ಬೆಳಗಾವಿ ವಾರ್ತೆ ಗೋಕಾಕ:** ವಿದ್ಯಾರ್ಥಿಗಳು ಕಠೀಣ ಶ್ರಮದಿಂದ ಹೆಚ್ಚಿನ ಸಾಧನೆ ಮಾಡಿ ಉನ್ನತ ಹುದ್ದೆ ಅಲಂಕರಿಸುವಂತೆ ಲಕ್ಷ್ಮೀ ಏಜ್ಯುಕೇಷನ ಟ್ರಸ್ಟನ ನಿರ್ದೇಶಕ ಸರ್ವೋತ್ತಮ ಜಾರಕಿಹೊಳಿ ಹೇಳಿದರು.




ರವಿವಾರದಂದು ನಗರದ ಹೆಮರೆಡ್ಡಿ ಕಲ್ಯಾಣ ಮಂಟಪದಲ್ಲಿ ಇಲ್ಲಿಯ ಜೆಸಿಐ ಸಂಸ್ಥೆಯವರು ಚಿಕ್ಕೋಡಿ ಹಾಗೂ ಬೆಳಗಾವಿ ಶೈಕ್ಷಣಿಕ ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಮತ್ತು ಪಿಯೂಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಮುಖ್ಯಅತಿಥಿಗಳಾಗಿ ಪಾಲ್ಗೊಂಡು ಮಾತನಾಡುತ್ತಿದ್ದರು. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಸಾಧಕರಿಗೆ ಹೆಚ್ಚಿನ ಅವಕಾಶಗಳಿವೆ. ವೈಜ್ಞಾನಿಕವಾಗಿ ಆಗುವ ಬದಲಾವಣೆಗೆ ವಿದ್ಯಾರ್ಥಿಗಳು ಈಗಲೇ ಸಿದ್ದರಾಗಿರಿ. ಸಂಸ್ಕೃತಿಯಲ್ಲಿ ನಮ್ಮ ದೇಶ ಜಗತ್ತಿಗೆ ಮಾದರಿಯಾಗಿದ್ದರು ವಿಜ್ಞಾನದಲ್ಲಿ ಇನ್ನು ಹೆಚ್ಚಿನ ಸಾಧನೆ ಮಾಡಬೇಕಾಗಿದೆ. ತಾವುಗಳು ಅದ್ಭುತ ಸಾಧನೆ ಮಾಡಿ ದೇಶದ ಕೀರ್ತಿಯನ್ನು ಹೆಚ್ಚಿಸಿರಿ. ಸಾಮಾ ಜಿಕ ಕಳಕಳಿಯೊಂದಿಗೆ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಜೆಸಿಐ ಸಂಸ್ಥೆ ಮಾಡುತ್ತಿರುವ ಈ ಕಾರ್ಯ ಮಾದರಿ ಯಾಗಿದೆ. ಇಂತಹ ಕಾರ್ಯಕ್ರಮಗಳಿಗೆ ಜಾರಕಿಹೊಳಿ ಕುಟುಂಬ ಸದಾ ಸಹಾಯ ಸಹಕಾರ ನೀಡುತ್ತದೆ ಎಂದರು.

ತಹಶೀಲದಾರ ಡಾ.ಮೋಹನ ಭಸ್ಮೆ, ಮಲ್ಲಿಕಾರ್ಜುನ ಕರಜಗಿಮಠ, ಅರುಣ ದುಧಾಳಿ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಮಾರ್ಗದರ್ಶನ ನೀಡಿದರು.

ವೇದಿಕೆಯ ಮೇಲೆ ಶೂನ್ಯ ಸಂಪಾದನ ಮಠದ ಶ್ರೀ ಬಸವಪ್ರಭು ಸ್ವಾಮಿಜಿ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಪರಶುರಾಮ ಘಸ್ತೆ, ಎನ್ ಆರ್ ಲಾತೂರ, ಅಶೋಕ ಪೂಜಾರಿ, ಬಸವರಾಜ ಕಲ್ಯಾಣಶೆಟ್ಟಿ, ಜೆಸಿಐ ಸಂಸ್ಥೆಯ ರಾಷ್ಟ್ರೀಯ ಸಂಯೋಜಕ ವಿಷ್ಣು ಲಾತೂರ, ಅಧ್ಯಕ್ಷರುಗಳಾದ ಕಿರಣ ಗಂಗರೆಡ್ಡಿ, ಮೀನಾಕ್ಷಿ ಸವದಿ, ಪದಾಧಿಕಾರಿಗಳಾದ ಸುಷ್ಮೀತಾ ಶೆಟ್ಟಿ, ಶೇಖರ ಉಳ್ಳಾಗಡ್ಡಿ, ರಾಜೇಶ್ವರಿ ಕಿತ್ತೂರ, ಸಂತೋಷ ಹವಾಲ್ದಾರ, ಸಂದೀಪ ಆನಿಗೋಳ ಹಾಗೂ ಜೆಸಿಐ ಇತರ ಪದಾಧಿಕಾರಿಗಳು ಇದ್ದರು.

# 21.52 ಕೋಟಿ ವೆಚ್ಚದ ನೂತನ 110/11 ಕೆ.ವಿ. ಉಪಕೇಂದ್ರಕ್ಕೆ ಚಾಲನೆ: ಶಾಸಕ ಲಕ್ಷ್ಮಣ ಸವದಿಯಿಂದ ಭೂಮಿಪೂಜೆ

**ಬೆಳಗಾವಿ ವಾರ್ತೆ ಅಥಣಿ:** ತಾಲೂಕಿನ ಸಂಕೋನಟ್ಟಿ ಗ್ರಾಮದ ವ್ಯಾಪ್ತಿಯಲ್ಲಿ ಕೆಪಿಟಿಸಿಎಲ್ ವತಿಯಿಂದ 21.52 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ 110/11 ಕೆ.ವಿ. ನೂತನ ವಿದ್ಯುತ್ ಉಪಕೇಂದ್ರದ ಕಾಮಗಾರಿಗೆ ಶಾಸಕ ಲಕ್ಷ್ಮಣ ಸವದಿ ಅವರು ಭೂಮಿಪೂಜೆ ನೆರವೇರಿಸಿದರು.



ಪ್ರಸ್ತುತ ಸಂಕೋನಟ್ಟಿಯಲ್ಲಿರುವ 33/11 ಕೆ.ವಿ. ಉಪಕೇಂದ್ರದ ಮೇಲೆ ಹೆಚ್ಚಿನ ಒತ್ತಡವಿದ್ದು, ಸುತ್ತಮುತ್ತಲಿನ ಗ್ರಾಮಗಳಲ್ಲಿ ಕಡಿಮೆ ವೋಲ್ಟೇಜ್ ಮತ್ತು ಆಗಾಗ ವಿದ್ಯುತ್ ವ್ಯತ್ಯಯ ಉಂಟಾಗುತ್ತಿತ್ತು ನೂತನ ಉಪಕೇಂದ್ರ ಸ್ಥಾಪನೆಯಿಂದ ಈ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯಲಿದೆ ವಿಶೇಷವಾಗಿ ರೈತರ ನೀರಾವರಿ ಪಂಪ್‌ಸೆಟ್‌ಗಳಿಗೆ ಹಗಲಿನ ವೇಳೆಯಲ್ಲಿ 7 ಗಂಟೆಗಳ ಕಾಲ ನಿರಂತರ ಹಾಗೂ ಗುಣಮಟ್ಟದ ತ್ರಿಫೇಸ್ ವಿದ್ಯುತ್ ಪೂರೈಕೆಯಾಗಲಿದೆ

ಈ ವೇಳೆ ಶಾಸಕ ಲಕ್ಷ್ಮಣ ಸವದಿ ಅವರು ಮಾತನಾಡಿ ಗ್ರಾಮೀಣ ಭಾಗದ ಅಭಿವೃದ್ಧಿಗೆ ವಿದ್ಯುತ್ ಮೂಲಸೌಕರ್ಯ ಅತ್ಯಗತ್ಯ ಮುಂದಿನ 20 ವರ್ಷಗಳ ವಿದ್ಯುತ್ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಈ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ ಸರ್ಕಾರದ ಸಹಕಾರದೊಂದಿಗೆ ಅಥಣಿ ಕ್ಷೇತ್ರವನ್ನು ರಾಜ್ಯದಲ್ಲೇ ಮಾದರಿ ಕ್ಷೇತ್ರವನ್ನಾಗಿ ರೂಪಿಸುವ ಗುರಿ ನಮ್ಮದು ಎಂದರು

ಈ ಕಾರ್ಯಕ್ರಮದಲ್ಲಿ ಕೆಪಿಟಿಸಿಎಲ್ ಮೇಜರ್ ವರ್ಕ್ಸ್ ವಿಭಾಗದ ಅಧಿಕಾರಿಗಳಾದ ಸಂಜಯ್ ಗೊಣಜಾಲ, ಸಂಪನ್ನವರ, ಶಬ್ಬಿರ್ ಪಾರ್ಥನಳ್ಳಿ, ಅನಿಲ ರಾವ ದೇಶಪಾಂಡೆ, ಗುತ್ತಿಗೆದಾರ ಅಜಯ ದೇಶಪಾಂಡೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಜೊತೆಗೆ ಸ್ಥಳೀಯ ಮುಖಂಡರಾದ ಅಶೋಕ್ ಸನಾಳ, ಮಲ್ಲಪ್ಪ ಅವಟಿ, ಅನಂತ ಬಸರಿಕೋಡಿ, ಲಕ್ಷ್ಮಣ ಮುಗಳಕೊಡ, ಅಶೋಕ ಕೌಜಲಗಿ, ರಾಹುಲ್ ನಾಯ್ಕ, ಮಲ್ಲು ಕೊಳ್ಳೋಲಿ, ಮುತ್ತು ಮೊಕಾಸಿ ಹಾಗೂ ಅಪಾರ ಸಂಖ್ಯೆಯ ರೈತರು ಮತ್ತು ಸಾರ್ವಜನಿಕರು ಪಾಲ್ಗೊಂಡಿದ್ದರು.

# ಹೆಬ್ಬಾಳ್ಕರಗೆ ಸಚಿವ ಸ್ಥಾನ ನೀಡಲು ಅಗ್ರಹ



**ಬೆಳಗಾವಿ ವಾರ್ತೆ ಮೂಡಲಗಿ :** ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಮೂಡಲಗಿಯ ಪಂಚಮಸಾಲಿ ಮುಖಂಡ ಸಂಗಮೇಶ ಕೌಜಲಗಿ ಪ್ರಕಟಣೆ ಮೂಲಕ ಅಗ್ರಹಿಸಿದ್ದಾರೆ

ಬೆಳಗಾವಿ ಗ್ರಾಮೀಣ ಕ್ಷೇತ್ರದ ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಜನಪರ ಕಾಳಜಿ, ಸಂಘಟನಾ ಸಾಮರ್ಥ್ಯ ಹಾಗೂ ಉತ್ತರ ಕರ್ನಾಟಕ ಭಾಗದಲ್ಲಿ ಕಾಂಗ್ರೆಸ್ ಪಕ್ಷವನ್ನು ಬಲಪಡಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಅವರು ಸತತವಾಗಿ ಜನರ ವಿಶ್ವಾಸ ಗಳಿಸಿ ಜನಸೇವೆಯಲ್ಲಿ ತೊಡಗಿಸಿಕೊಂಡಿದ್ದು, ರಾಜ್ಯ ರಾಜಕಾರಣದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ.

ಮಹಿಳಾ ಸಬಲೀಕರಣ ಮತ್ತು ಮಹಿಳಾ ಪ್ರತಿನಿಧಿತ್ವವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಹೆಚ್ಚಿನ ಜವಾಬ್ದಾರಿ ನೀಡಿ ಪ್ರಭಲ ಸಚಿವ ಸ್ಥಾನದ ಜೊತೆ ಉಪಮುಖ್ಯಮಂತ್ರಿ (ಡಿಸಿಎಂ) ಹುದ್ದೆಗೆ ಪರಿಗಣಿಸಬೇಕೆಂದು ಬೆಳಗಾವಿ ಹಾಗೂ ಉತ್ತರ ಕರ್ನಾಟಕ ಭಾಗದ ಜನರ ಆಶಾಯವಾಗಿದೆ.

ಉತ್ತರ ಕರ್ನಾಟಕದ ಪ್ರಭಾವಿ ಮಹಿಳಾ ನಾಯಕಿಯಾಗಿ ಗುರುತಿಸಿಕೊಂಡಿರುವ ಅವರಿಗೆ ಸೂಕ್ತ ಅವಕಾಶ ನೀಡುವುದು ಈ ಭಾಗದ ಜನರ ಬಹುಕಾಲದ ಹಕ್ಕೊತ್ತಾಯವಾಗಿದೆ. ಅವರ ಅನುಭವ, ಜನಸೇವೆ ಹಾಗೂ ನಾಯಕತ್ವಕ್ಕೆ ತಕ್ಕ ಗೌರವ ದೊರಕಬೇಕು ಎಂಬುದು ನಮ್ಮ ಆಶಯವಾಗಿದ್ದು, “ಉತ್ತರ ಕರ್ನಾಟಕದ ಧ್ವನಿಗೆ ನ್ಯಾಯ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಹೆಚ್ಚಿನ ಜವಾಬ್ದಾರಿ ನೀಡಬೇಕೆಂದು ಸಂಗಮೇಶ ಕೌಜಲಗಿ ಆಗ್ರಹಿಸಿದ್ದಾರೆ.

# ಸಂಗೀತವು ದೈವಿಕ ಮತ್ತು ದೇವತೆಗಳಿಗೆ ಅತ್ಯಂತ ಪ್ರಿಯವಾದುದು. ದೇವತೆಗಳೂ ಸಂಗೀತವನ್ನು ಆಲಿಸುವ ಮತ್ತು ಆನಂದಿಸುವ ಅನೇಕ ನಂಬಿಕೆಗಳಿವೆ



ಗೋಕಾಕ: ನಗರದ ಶ್ರೀ ಬನಶಂಕರಿ ದೇವಸ್ಥಾನದಲ್ಲಿ ಗುಂಪು ಕಲಾವಿದರ ಬಳಗ ಆಯೋಜಿಸಿದ್ದ ಸಂಗೀತ ಕಾರ್ಯಕ್ರಮ ಉದ್ಘಾಟಿಸುತ್ತಿರುವ ಗಣ್ಯರು.

**ಬೆಳಗಾವಿ ವಾರ್ತೆ ಗೋಕಾಕ:** ಸಂಗೀತವು ದೈವಿಕ ಮತ್ತು ದೇವತೆಗಳಿಗೆ ಅತ್ಯಂತ ಪ್ರಿಯವಾದುದು. ದೇವತೆಗಳೂ ಸಂಗೀತವನ್ನು ಆಲಿಸುವ ಮತ್ತು ಆನಂದಿಸುವ ಅನೇಕ ನಂಬಿಕೆಗಳಿವೆ ಎಂದು ವರ್ತಕ ಮಹಾದೇವ ಈಟಿ ಹೇಳಿದರು.

ನಗರದ ಶ್ರೀ ಬನಶಂಕರಿ ದೇವಸ್ಥಾನದಲ್ಲಿ ಗುಂಪು ಕಲಾವಿದರು ಅಧಿಕ ಮಾಸದ ನಿಮಿತ್ತ ಆಯೋಜಿಸಿದ್ದ 210ನೇ ಮಾಸಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಸಂಗೀತ ಶಿಕ್ಷಣವು ಮಕ್ಕಳ ಸಮಗ್ರ ವ್ಯಕ್ತಿತ್ವ ವಿಕಸನಕ್ಕೆ ಪ್ರಮುಖ ಸಾಧನವಾಗಿದೆಎಂದು ಹೇಳಿದರು.

ವೇದಿಕೆ ಮೇಲೆ ರೋಟರಿ ಸಂಸ್ಥೆಯ ಅಧ್ಯಕ್ಷ ಗಿರೀಶ್ ಝುಂವರ, ಡಾ ಸುಶ್ರುತ್ ಕಡಲಗಿಕರ, ಬಸವರಾಜ ಕ್ಯಾಸ್ತಿ, ಬಸವರಾಜ ಮಠಪತಿ, ಪ್ರದೀಪ ಯಂಟಗೌಡ್ರ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಸಂಗೀತ ವಿದ್ಯಾಲಯದ ವಿದ್ಯಾರ್ಥಿಗಳಿಂದ ಜರುಗಿದ ಸಂಗೀತಕಾರ್ಯಕ್ರಮಕ್ಕೆ ಲಿಮ್ಕಾ ವಿಶ್ವದಾಖಲೆಯ ಕಲಾವಿದ ಜಿ ಕೆ ಕಾಡೇಶಕುಮಾರ್ ವಾದ್ಯ ಸಹಕಾರ ನೀಡಿದರು.

# ಜೂನ್ 15 ರಂದು ತಾಲೂಕು ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆ



**ಬೆಳಗಾವಿ ವಾರ್ತೆ ಗದಗ:** ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಟಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಅವರ ಅಧ್ಯಕ್ಷತೆಯಲ್ಲಿ ಜೂನ್ 15 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ವಿ.ಸಿ. ಹಾಲ್ ದಲ್ಲಿ ಗದಗ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಏರ್ಪಡಿಸಲಾಗಿದೆ ಎಂದು ಗದಗ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001